RNI: KNKAN/ 25/A5387 | ಸಂಪಾದಕರು: ರಾಜೇಶ್ವರಿ ಎಸ್. ಓಲೇಕಾರ | ಸಿಇಒ: ಚಂದ್ರಶೇಖರ ಎಸ್.ಕೆ. | ಸಹ ಸಂಪಾದಕರು: ಶಿವಕುಮಾರ

# ಸಮಾಲೋಚನೆ ಸುದ್ದಿ

ಕನ್ನಡ ದಿನ ಪತ್ರಿಕೆ

ನೇರ ನಿಖರ ನಿರ್ದಿಷ್ಟ

ಮೊ.ನಂ: 8095203132 PMG/KA/NK/HVR-59/2026-28 SAMALOCHANE RANEBENNURSUDDI Kannada Daily Morning

ಚೆನ್ನಾಗಿ ಓದಲು ಹೇಳಿದ್ದಕ್ಕೆ ಬಾಲಕ ಆತ್ಮಹತ್ಯೆ? » 2

ಅಗಲೀಕರಣಕ್ಕೂ ಮುನ್ನ ಧೂಳು ಈಗಲೂ ಅದರದೇ ಗೋಳು » 3

ಶೌಚಾಲಯ ಗುಂಡಿ ಸ್ವಚ್ಛಗೊಳಿಸಲು ಸಕ್ಕಿಂಗ್-ಜೆಟ್ಟಿಂಗ್ ಯಂತ್ರಬಳಸಿ » 4

ಸಂಪುಟ (Volume): 1 ಸಂಚಿಕೆ (Issue): 188 ಪುಟ (Page): 4 ದರ Rs. 2 ಬುಧವಾರ 30 ಸೆಪ್ಟೆಂಬರ್ 2026 ● 30 SEPTEMBER 2026 ಹಾವೇರಿ ಧಾರವಾಡ ಗದಗ ಕೊಪ್ಪಳ ವಿಜಯನಗರ ಬೆಳಗಾವಿ ಉತ್ತರ ಕನ್ನಡ samalochanersuddi@gmail.com

# ರಕ್ಷಣಾ ಇಲಾಖೆ ಒಡೆತನದ ಜಾಗ ಹಸ್ತಾಂತರಿಸಿ

## ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಭೇಟಿ ಮಾಡಿ ಸಿಎಂ ಡಿ.ಕೆ. ಶಿವಕುಮಾರ ಮನವಿ

**ಬೆಂಗಳೂರು:** ನಗರದಲ್ಲಿ ಕೈಗೊಳ್ಳಲು ಉದ್ದೇಶಿಸಿರುವ ಪ್ರಮುಖ 7 ಅಭಿವೃದ್ಧಿ ಯೋಜನೆಗಳಿಗೆ ರಕ್ಷಣಾ ಇಲಾಖೆ ಒಡೆತನದಲ್ಲಿರುವ ಜಾಗಗಳನ್ನು ಹಸ್ತಾಂತರಿಸಲು ಹಾಗೂ ಕಾಮಗಾರಿಗಳಿಗೆ ಅನುಮತಿ ನೀಡುವಂತೆ ಕೋರಿ ರಾಜ್ಯ ಸರಕಾರವು, ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರಿಗೆ ಮನವಿ ಸಲ್ಲಿಸಿದೆ.

ಅವಳಿ ಸುರಂಗ ಯೋಜನೆ, ಲಿಂಕ್ ರಸ್ತೆ ನಿರ್ಮಾಣ, ಮೇಖ್ರಿ ವೃತ್ತದ ಬಳಿ ಹಾಗೂ ಸರ್ಜಾಪುರ ರಸ್ತೆ ವಿಸ್ತರಣೆಗಾಗಿ ಜಾಗ ನೀಡುವಂತೆ ರಕ್ಷಣಾ ಇಲಾಖೆಯನ್ನು ಕೋರಲಾಗಿದೆ. ಇಬ್ಬಲೂರು ಫೈರಿಂಗ್ ರೇಂಜ್ ಬಳಿ ರಕ್ಷಣಾ ಇಲಾಖೆಯ ಅಧೀನದಲ್ಲಿರುವ ಖಾಲಿ ಜಾಗದಲ್ಲಿ ಉದ್ಯಾನ ನಿರ್ಮಾಣಕ್ಕೆ ಅನುಮತಿ ಹಾಗೂ ಯಲಹಂಕ-ಎಚ್‌ಎಎಲ್ ವಾಯುನೆಲೆ ಸುತ್ತಲಿನ ಪ್ರದೇಶಗಳಲ್ಲಿ ಕಟ್ಟಡ ನಿರ್ಮಾಣ ನಿಯಮ ಸಡಿಲಿಕೆಗೆ ಮನವಿ ಮಾಡಲಾಗಿದೆ. ಈ ಸಂಬಂಧ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನು ಹೊಸದಿಲ್ಲಿಯಲ್ಲಿ ಸೋಮವಾರ ಭೇಟಿ ಮಾಡಿ ಮನವಿ ಪತ್ರ ಸಲ್ಲಿಸಿದರು.

**ಉದ್ಯಾನ ಯೋಜನೆ:** 'ಇಬ್ಬಲೂರು ಫೈರಿಂಗ್ ರೇಂಜ್ ಬಳಿ ರಕ್ಷಣಾ ಇಲಾಖೆಗೆ ಸೇರಿದ ಸುಮಾರು 730 ಎಕರೆಯಷ್ಟು ಜಮೀನು ಬಳಕೆಯಾಗದೆ ಖಾಲಿ ಇದೆ. ಅಭ್ಯಾಸಕ್ಕಾಗಿ ಮತ್ತೊಂದು ರೇಂಜ್ ಸ್ಥಾಪಿಸಿರುವುದರಿಂದ ಈ ಸ್ಥಳವು ಯೋಗ್ಯ ರೀತಿಯಲ್ಲಿ ಬಳಕೆಯಾಗುತ್ತಿಲ್ಲ. ಈ ಜಾಗವನ್ನು ಉದ್ಯಾನ ಹಾಗೂ ಹಸಿರು ವಲಯವನ್ನಾಗಿ ಅಭಿವೃದ್ಧಿಪಡಿಸಲು ರಾಜ್ಯ ಸರಕಾರ ಯೋಜನೆ ರೂಪಿಸಿದೆ. ನಾವು ಜಮೀನಿನ ಮಾಲೀಕತ್ವ ಕೋರುತ್ತಿಲ್ಲ. ವಾರಾಣಸಿಯಲ್ಲಿ ಆರ್‌ಬಿಐ ತನ್ನ ಜಾಗವನ್ನು ಉದ್ಯಾನ ನಿರ್ಮಾಣಕ್ಕೆ ನೀಡಿದೆ. ಅಂತೆಯೇ ನಮಗೂ ಅನುಮತಿ ನೀಡಬೇಕು' ಎಂದು ಪತ್ರದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೋರಿದ್ದಾರೆ.

**ಕೊಳಚೆ ಪ್ರದೇಶಗಳ ಪುರೋಭಿವೃದ್ಧಿ:** 'ರಕ್ಷಣಾ ಇಲಾಖೆಯ ನಾನಾ ಸ್ಥಳಗಳಲ್ಲಿ 10 ಅಧಿಸೂಚಿತ ಕೊಳಚೆ ಪ್ರದೇಶಗಳಿವೆ. ಅವು ಸುಮಾರು 43 ಎಕರೆ ಪ್ರದೇಶದಲ್ಲಿ ವಿಸ್ತರಿಸಿಕೊಂಡಿವೆ. ಈ ದೀರ್ಘಕಾಲಿನ ಸಮಸ್ಯೆಯನ್ನು ಪ್ರಾಯೋಗಿಕ, ನ್ಯಾಯಸಮ್ಮತ ಹಾಗೂ ಪರಸ್ಪರ ಸಮ್ಮತಿ ಮೇರೆಗೆ ಬಗೆಹರಿಸಲು ಸರಕಾರ ಬದ್ಧವಾಗಿದೆ. ನಗರದ ಪರಿಮಿತಿಯಲ್ಲಿ ಸಮಾನ ವಿಸ್ತೀರ್ಣದ ಜಮೀನು ಗುರುತಿಸಿಕೊಡುವುದು ಕಷ್ಟ. ಸಾಕಷ್ಟು ಅಭಿವೃದ್ಧಿ ಹೊಂದಿರುವ ಮಹಾನಗರದಲ್ಲಿ ಅಸ್ತಿತ್ವದಲ್ಲಿರುವ ಸೇನಾ ಅಥವಾ ರಕ್ಷಣಾ ಸಂಸ್ಥೆಗಳಿಗೆ ಹೊಂದಿಕೊಂಡಂತೆ ಪರ್ಯಾಯ ಜಮೀನನ್ನು ಗುರುತಿಸುವುದು ಸಾಧ್ಯವಿಲ್ಲ ಎಂಬುದನ್ನು ಮಿಲಿಟರಿ ಅಧಿಕಾರಿಗಳೂ ಒಪ್ಪಿಕೊಂಡಿದ್ದಾರೆ' ಎಂದು ವಿವರಿಸಿದ್ದಾರೆ. 'ರಕ್ಷಣಾ ಇಲಾಖೆಯ ಅಧಿಕಾರಿಗಳು ಸೂಕ್ತ ಜಮೀನಿನ ಆಯ್ಕೆಗೆ ಅನುಕೂಲವಾಗುವಂತೆ ಎಲ್ಲ ಜಮೀನುಗಳ ಪಟ್ಟಿಯನ್ನು ಹಂಚಿಕೊಳ್ಳಲಾಗುವುದು. ಮಳೆಗಾಲದಲ್ಲಿ ಈ ಪ್ರದೇಶಗಳು ಜಲಾವೃತಗೊಳ್ಳುತ್ತಿದ್ದು, ಅಲ್ಲಿನ ನಿವಾಸಿಗಳು ತೊಂದರೆ ಅನುಭವಿಸುತ್ತಿದ್ದಾರೆ. ಈ ಪ್ರದೇಶಗಳಲ್ಲಿ ತುರ್ತಾಗಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಅನುಮತಿ ನೀಡಬೇಕು' ಎಂದು ಮನವಿ ಮಾಡಿಕೊಂಡಿದ್ದಾರೆ.

**ಅಗರ- ಸರ್ಜಾಪುರ ರಸ್ತೆ ವಿಸ್ತರಣೆ:** 'ಬೆಂಗಳೂರಿನ ಮಾಸ್ಟರ್ ಪ್ಲಾನ್-2015ರ ಅನ್ವಯ ಅಗರ ರಸ್ತೆಯಿಂದ ಈಜಿಪುರ ಮಾರ್ಗವಾಗಿ ಸರ್ಜಾಪುರ ರಸ್ತೆಯನ್ನು ಸಂಪರ್ಕಿಸುವ 24 ಮೀಟರ್ ಅಗಲದ ರಸ್ತೆ ನಿರ್ಮಾಣಕ್ಕೆ ಸರಕಾರ ಮುಂದಾಗಿದೆ. ಅಧಿಕ ಸಂಚಾರ ದಟ್ಟಣೆಯುಳ್ಳ ಒಳ ಮತ್ತು ಹೊರವರ್ತುಲ ರಸ್ತೆಗಳಲ್ಲಿ ಬೈಪಾಸ್ ರಸ್ತೆ ನಿರ್ಮಿಸುವ ಮೂಲಕ ಪ್ರಯಾಣಿಕರಿಗೆ ಅನುಕೂಲ ಮಾಡಿಕೊಡುವ ಗುರಿ ಹೊಂದಿದ್ದು, ಇದಕ್ಕೆ ಅಗತ್ಯವಿರುವ 10.07 ಎಕರೆ ಬಳಕೆಗೆ ಇಲಾಖೆಗೆ ಮನವಿ ಸಲ್ಲಿಸಲಾಗಿತ್ತು. ಸ್ಥಳೀಯ ಮಿಲಿಟರಿ ಅಧಿಕಾರಿಗಳೊಂದಿಗೆ ಜಂಟಿ ಸಮೀಕ್ಷೆ ನಡೆಸಿ, ವಿಸ್ತೀರ್ಣವನ್ನು 13.709 ಎಕರೆಗೆ ಪರಿಷ್ಕರಿಸಿ 2025ರ ಫೆ.4ರಂದು ಅರ್ಜಿ ಸಲ್ಲಿಸಲಾಗಿದೆ. ಈ ಜಮೀನುಗಳ ಹಸ್ತಾಂತರ ಪ್ರಕ್ರಿಯೆಯನ್ನು ಚುರುಕುಗೊಳಿಸಿ, ಸಂಚಾರ ದಟ್ಟಣೆ ತಗ್ಗಿಸಲು ನೆರವಾಗಬೇಕು' ಎಂದು ತಿಳಿಸಿದ್ದಾರೆ.

**ಅವಳಿ ಸುರಂಗ ನಿರ್ಮಾಣ:** 'ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಮತ್ತು ಉತ್ತರ ಬೆಂಗಳೂರಿನ ಸಂಚಾರ ದಟ್ಟಣೆ ನಿವಾರಿಸಲು, ಬಳ್ಳಾರಿ ರಸ್ತೆಯ ಹೆಬ್ಬಾಳದಿಂದ (ಎಸ್ಟೀಮ್ ಮಾಲ್ ಜಂಕ್ಷನ್) ಸೆಂಟ್ರಲ್ ಸಿಲ್ಕ್ ಬೋರ್ಡ್‌ವರೆಗೆ ಭೂಗತ ಸುರಂಗ ನಿರ್ಮಿಸಲು ತೀರ್ಮಾನಿಸಲಾಗಿದೆ. ಹೆಬ್ಬಾಳ ಡಿಫೆನ್ಸ್ ಡೈರಿ ಫಾರ್ಮ್‌ನ ಭಾಗವಾಗಿರುವ 2.039 ಎಕರೆ ರಕ್ಷಣಾ ಜಮೀನಿನ ಅಗತ್ಯವಿದೆ. ಈ ಭೂಗತ ಸುರಂಗ ಯೋಜನೆಯು ಪಿಆರ್‌ಟಿಸಿ ಮತ್ತು ಡಿಜಿ-ಕ್ಯೂಎದ ರಕ್ಷಣಾ ಪ್ರದೇಶದ ಮೇಖ್ರಿ ಸರ್ಕಲ್ ಮೂಲಕ ಹಾದುಹೋಗುತ್ತದೆ. ಇಲ್ಲಿಕಾಮಗಾರಿಗಳನ್ನು ಕೈಗೊಳ್ಳಲು ಅನುಮತಿ ಕೋರಿ 2025ರ ಮಾ.25ರಂದು ಅರ್ಜಿ ಸಲ್ಲಿಸಲಾಗಿತ್ತು. ಈ ಸಂಬಂಧ, ಅಧಿಕಾರಿಗಳ ಮಂಡಳಿಯು 2026ರ ಜು.29ರ ಆದೇಶದಲ್ಲಿಲೈಸೆನ್ಸ್ ಶುಲ್ಕವಾಗಿ ಜಮೀನು ಬೆಲೆಯ ಶೇ 33ರಷ್ಟಾದ 60.72 ಕೋಟಿ ರೂ. ಪಾವತಿಸಲು ಆದೇಶಿಸಿದೆ. ಇದು ದುಬಾರಿಯಾಗಿದ್ದು, ಲೈಸೆನ್ಸ್ ಶುಲ್ಕವನ್ನು ಜಮೀನು ಬೆಲೆಯ ಶೇ.2ಕ್ಕೆ ಇಳಿಸಬೇಕು' ಎಂದು ಮನವಿ ಮಾಡಿದ್ದಾರೆ.



### ಲಿಂಕ್ ರಸ್ತೆ ನಿರ್ಮಾಣಕ್ಕೆ ನೆರವು ನೀಡಿ

**'ವಿಮಾನ ನಿಲ್ದಾಣ ರಸ್ತೆಯಿಂದ ಹೆಬ್ಬಾಳ ಡಿಫೆನ್ಸ್ ಡೈರಿ ಫಾರ್ಮ್ ಹಿಂಭಾಗದಲ್ಲಿರುವ ಸರೋವರ ಲೇಔಟ್‌ಗೆ ನೇರ ರಸ್ತೆ ಸಂಪರ್ಕ ಕಲ್ಪಿಸಲು ಯೋಜನೆ ರೂಪಿಸಲಾಗಿದೆ. ಒಟ್ಟು 18 ಮೀಟರ್ ಅಗಲದ ರಸ್ತೆ ನಿರ್ಮಿಸಬೇಕಿದೆ. ಬಿಬಿಎಂಪಿಯು ಅಗತ್ಯ ಸಮೀಕ್ಷೆ ಪೂರ್ಣಗೊಳಿಸಿದ್ದು, 6.837 ಎಕರೆ ರಕ್ಷಣಾ ಜಮೀನು ಹಸ್ತಾಂತರಕ್ಕೆ ಕೋರಿ ರಕ್ಷಣಾ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಲಾಗಿದೆ. ಇದಕ್ಕೆ ಅನುಮತಿ ನೀಡಬೇಕು' ಎಂದು ಕೋರಿದ್ದಾರೆ.**

### 'ಏರ್‌ಪೋರ್ಟ್ ಬಳಿ ಕಟ್ಟಡ ನಿರ್ಮಾಣ ನಿಯಮ ಸಡಿಲಿಸಿ

**'ಬೆಂಗಳೂರಿನಲಿ 4 ವಿಮಾನ ನಿಲ್ದಾಣಗಳು ಕಾರ್ಯಾಚರಿಸುತ್ತಿವೆ. ಎಚ್‌ಎಎಲ್ ವಿಮಾನ ನಿಲ್ದಾಣ, ಯಲಹಂಕದಲ್ಲಿಎರಡು ವಾಯುನೆಲೆಗಳಿವೆ. ಎಚ್‌ಎಎಲ್ ವಿಮಾನ ನಿಲ್ದಾಣವು ನಗರದ ಕೇಂದ್ರ ಭಾಗದಲ್ಲಿದ್ದು, ಅಭಿವೃದ್ಧಿಗೆ ಭಾರಿ ಬೇಡಿಕೆ ಇದೆ. ಆದರೆ, ವಿಮಾನ ನಿಲ್ದಾಣದ ಅಧಿಕಾರಿಗಳು ವಿಧಿಸುತ್ತಿರುವ ಹೆಚ್ಚುವರಿ ನಿರ್ಬಂಧಗಳಿಂದ ಅದರ ಸುತ್ತಮುತ್ತಲಿನ ಪ್ರದೇಶಗಳ ಅಭಿವೃದ್ಧಿಗೆ ತೀವ್ರ ಅಡ್ಡಿಯುಂಟು ಮಾಡುತ್ತಿವೆ. ನಗರಾಭಿವೃದ್ಧಿ ಹಾಗೂ ಸಂಚಾರ ಯೋಜನೆಗಳ ಮೇಲೆ ಪರಿಣಾಮ ಬೀರುತ್ತಿದೆ' ಎಂದು ಪತ್ರದಲ್ಲಿವಿವರಿಸಲಾಗಿದೆ. ಜಿಎಸ್‌ಆರ್ 751 (ಇ) ಪ್ರಕಾರ ರಕ್ಷಣಾ ವಿಮಾನ ನಿಲ್ದಾಣಗಳ 20 ಕಿ.ಮೀ. ವ್ಯಾಪ್ತಿಯಲ್ಲಿನಿರ್ಬಂಧಗಳನ್ನು ವಿಧಿಸಲಾಗುತ್ತಿದೆ. ಈ ಬಗ್ಗೆ ರಕ್ಷಣಾ ವಿಮಾನ ನಿಲ್ದಾಣಗಳ ಅಧಿಕಾರಿಗಳಿಗೆ ಸ್ಪಷ್ಟ ನಿಬಂಧನೆ, ಮಾರ್ಗಸೂಚಿಗಳನ್ನು ನೀಡಬೇಕು. ಕಡ್ಡಾಯ ನಿರಾಕ್ಷೇಪಣಾ ಪ್ರಮಾಣಪತ್ರ ನಿಯಮವನ್ನು 20 ಕಿ.ಮೀ. ಬದಲಿಗೆ 15 ಕಿ.ಮೀಗೆ ಸೀಮಿತಗೊಳಿಸಬೇಕು. ಹೆಲಿಕಾಪ್ಟರ್‌ಗಳನ್ನು ಜೋಡಣೆ ಮಾಡುತ್ತಿರುವ ತುಮಕೂರಿನ ಎಚ್‌ಎಎಲ್-2ಗೆ ಹೆಲಿಕಾಪ್ಟರ್ ಪರೀಕ್ಷಾ ಚಟುವಟಿಕೆಗಳನ್ನು ಸ್ಥಳಾಂತರಿಸುವ ಮನವಿಯನ್ನು ಪರಿಗಣಿಸಬೇಕು' ಎಂದು ಕೋರಲಾಗಿದೆ.**

### ರಸ್ತೆ ಅಗಲೀಕರಣಕ್ಕೆ ಜಮೀನು ಹಸ್ತಾಂತರಿಸಿ

**'ಜಿಬಿಎ, ಬಳ್ಳಾರಿ ರಸ್ತೆಯ ಮೇಖ್ರಿ ವೃತ್ತದವರೆಗೆ ರಸ್ತೆ ವಿಸ್ತರಣೆ ಕಾಮಗಾರಿಯನ್ನು ಕೈಗೆತ್ತಿಕೊಂಡಿದೆ. ಪಿಆರ್‌ಟಿಸಿ ಮತ್ತು ಡಿಜಿಕ್ಯೂಎಯಿಂದ ಅಗತ್ಯವಿರುವ 0.775 ಎಕರೆ ಜಮೀನು ಹಸ್ತಾಂತರ ಕೋರಿ ಅರ್ಜಿ ಸಲ್ಲಿಸಲಾಗಿದೆ. ಇದು ದ್ವಿಪಥದ ರಸ್ತೆಯನ್ನು ಮೂರು ಪಥದ ರಸ್ತೆಯಾಗಿ ಅಗಲೀಕರಣಗೊಳಿಸಲು ನೆರವಾಗುತ್ತದೆ. ಈ ಮೂಲಕ ವಿಮಾನ ನಿಲ್ದಾಣದ ಪ್ರಯಾಣದ ಹಾದಿಯಲ್ಲಿಪ್ರಮುಖ ಜಂಕ್ಷನ್ ಆಗಿರುವ ಮೇಖ್ರಿ ಸರ್ಕಲ್‌ನಲ್ಲಿಸಂಚಾರ ದಟ್ಟಣೆ ಕಡಿಮೆಯಾಗಲಿದೆ. ಆದ ಕಾರಣ ರಾಜ್ಯ ಸರಕಾರದ ಈ ಎಲ್ಲಪ್ರಸ್ತಾವನೆಗಳನ್ನು ಪರಿಗಣಿಸಬೇಕು' ಎಂದು ರಕ್ಷಣಾ ಸಚಿವರಿಗೆ ಸಿಎಂ ಮನವಿ ಸಲ್ಲಿಸಿದ್ದಾರೆ.**

# ಚಹಾ ಕೊಟ್ಟು ಚಿನ್ನ ಎಗರಿಸಿ ಕಿರಾತಕ

**ಬೆಂಗಳೂರು:** ಸ್ಯಾಟಲೈಟ್ ಬಸ್ ನಿಲ್ದಾಣದಿಂದ ಮೈಸೂರಿನಲ್ಲಿ ತನ್ನ ಮಗಳ ಮನೆಗೆ ಪ್ರಯಾಣ ಬೆಳೆಸಿದ್ದ ವೃದ್ದೆಗೆ ಬಸ್ ಪ್ರಯಾಣ ದುಬಾರಿಯಾಗಿ ಪರಿಣಮಿಸಿದ್ದು, ತನ್ನ ಪಕ್ಕದಲ್ಲೇ ಕುಳಿತಿದ್ದ ಸಹಪ್ರಯಾಣಿಕ ವ್ಯಕ್ತಿಯೋರ್ವ ಆಕೆಗೆ ಟೀ ಕೊಟ್ಟು ಪುಸಲಾಯಿಸಿ ಬಳಿಕ ಆಕೆಯ ಬಳಿಯಿದ್ದ ಬರೋಬ್ಬರಿ 29 ಗ್ರಾಂ ಚಿನ್ನದ ಸರ ಕದ್ದಿರುವ ಘಟನೆ ನಡೆದಿದೆ.

ಬಸ್‌ನಲ್ಲಿ ವೃದ್ಧೆಗೆ ಟೀ ಕೊಟ್ಟು ಚಿನ್ನ ಕದ್ದ ಸಹಪ್ರಯಾಣಿಕ

ಹೀಗೆ ಬಸ್‌ನಲ್ಲಿ ಚಿನ್ನದ ಸರ ಕಳೆದುಕೊಂಡಿರುವ ವೃದ್ದೆಯನ್ನು ಚೆನ್ನಮ್ಮ ಎಂದು ಗುರುತಿಸಲಾಗಿದ್ದು, ಈಕೆ ಮೈಸೂರಿನಲ್ಲಿರುವ ತನ್ನ ಮಗಳ ಮನೆಗೆ ಹೋಗಲೆಂದು ದೊಡ್ಡಬಳ್ಳಾಪುರದ ತಿಮ್ಮನಹಳ್ಳಿಯಿಂದ ಸೆ.25ರಂದು ಬೆಳ್ಳಗೆ 5:30ರ ಸುಮಾರಿಗೆ ಹೊರಟ್ಟಿದ್ದು, ಬೆಳ್ಳಗೆ 8ಗಂಟೆ ಸುಮಾರಿಗೆ ಸ್ಯಾಟಲೈಟ್ ಬಸ್ ನಿಲ್ದಾಣಕ್ಕೆ ತಲುಪಿ ಟಿಕೆಟ್ ತೆಗೆದುಕೊಂಡು ಬಸ್ ಹತ್ತಿದ್ದಾರೆ.

ಹೀಗೆ ಮೈಸೂರಿಗೆ ಹೋಗುವ ಬಸ್‌ನಲ್ಲಿ ಕುಳಿತಿದ್ದ ಚೆನ್ನಮ್ಮರ ಪಕ್ಕದಲ್ಲೇ ಕಪ್ಪು ಪ್ಯಾಂಟ್ ಹಾಗೂ ಬಿಳಿ ಶರ್ಟ್ ಧರಿಸಿದ್ದ 45 ವರ್ಷದ ವ್ಯಕ್ತಿಯೋರ್ವ ಸಹಪ್ರಯಾಣಿಕನ ಸೋಗಿನಲ್ಲಿ ಬಂದು ಕುಳಿತಿದ್ದು, ಆಕೆಯೊಂದಿಗೆ ಸ್ನೇಹ ಬೆಳೆಸಿದ್ದಾನೆ. ಬಳಿಕ ತಾನು ಟೀ ತರುವುದಾಗಿ ಹೇಳಿ ಆತನ ಬ್ಯಾಗ್ ಅನ್ನು ಆಕೆಯ ಪಕ್ಕದಲ್ಲೇ ಇಟ್ಟು ಹೋಗಿ 2 ಕಪ್‌ಗಳಲ್ಲಿ ಟೀ ತಂದಿದ್ದು, ಚೆನ್ನಮ್ಮರಿಗೆ ಕುಡಿಯಲು ತಿಳಿಸಿದ್ದಾನೆ. ಈ ವೇಳೆ, ಆಕೆ ಬೇಡ ಎಂದರೂ ನೀವು ನನ್ನ ತಾಯಿ ಇದ್ದ ಹಾಗೆ ಎಂದು ಹೇಳುವ ಮೂಲಕ ಆಕೆಯ ನಂಬಿಕೆ ಗಳಿಸಿದ್ದು, ಇದಕ್ಕೆ ಮರುಳಾದ ಆಕೆ ಆ ಟೀಯನ್ನು ಕುಡಿದಿದ್ದು, ಆತನಿಗೆ ದಾಳಿಂಬೆ ಹಣ್ಣನ್ನು ಸಹ ನೀಡಿದ್ದಾಳೆ.

ಆದರೆ, ಇದಾದ ಕೆಲವೇ ಹೊತ್ತಲ್ಲಿ ಚೆನ್ನಮ್ಮ ಬಸ್‌ನಲ್ಲಿ ನಿದ್ದೆಗೆ ಜಾರಿದ್ದು, ಬಳಿಕ ಬಸ್‌ನಿಂದ ಕೆಳಗಿಳಿದ ನಂತರ ಆಕೆಯ ಕತ್ತಲ್ಲಿ 29 ಗ್ರಾಂ ಚಿನ್ನದ ಸರ ಕಳ್ಳತನವಾಗಿರುವುದು ಆಕೆಯ ಗಮನಕ್ಕೆ ಬಂದಿದೆ. ಇದರಿಂದ ಗಾಬರಿಗೊಂಡ ಆಕೆ ಮಗನಿಗೆ ವಿಚಾರ ತಿಳಿಸಿದ್ದು, ಈ ಸಹಪ್ರಯಾಣಿಕನ ಮೇಲೆ ಅನುಮಾನ ವ್ಯಕ್ತಪಡಿಸಿ ಕೊನೆಗೆ ಕಾರಿನಲ್ಲಿ ಮನೆ ತೆರಳಿದ್ದಾರೆ.

ಇದಾದ ಮರುದಿನವೇ ಚಿನ್ನದ ಸರ ಕಳ್ಳತನ ವಾಗಿರುವ ಕುರಿತು ಬ್ಯಾಟರಾಯನಪುರ ಪೊಲೀಸ್ ಠಾಣೆಗೆ ತೆರಳಿ ಆಕೆ ಆ ವ್ಯಕ್ತಿಯ ಮೇಲೆ ಅನುಮಾನ ವ್ಯಕ್ತಪಡಿಸಿ ದೂರು ನೀಡಿದ್ದು, ಃಓಖ ಕಾಯ್ದೆ 303 ಹಾಗೂ 318 ಅಡಿ ಕಳ್ಳತನ, ವಂಚನೆ ಪ್ರಕರಣ ದಾಖಲಿಸಲಾಗಿದೆ. ಸದ್ಯ ಸಿಸಿಟಿವಿ ದೃಶ್ಯಗಳನ್ನು ಆಧರಿಸಿ ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಮುಂದಿನ ಸಲ ಪ್ರದೀಪ ಈಶ್ವರಗೆ ಟಿಕೆಟ್ ನೀಡಬೇಡಿ

## ಕಾಂಗ್ರೆಸ್ ಮುಖಂಡರಿಂದಲೇ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದಗೆ ದೂರು

**ಚಿಕ್ಕಬಳ್ಳಾಪುರ:** 25 ವರ್ಷಗಳ ಬಳಿಕ ನಾನು ಸಿಎಂ ಆಗಬೇಕು ಎಂಬ ಆಸೆ ಇದೆ ಎಂದು ಹೇಳಿದ್ದ ಶಾಸಕ ಪ್ರದೀಪ್ ಈಶ್ವರ್ ಅವರಿಗೆ ಸೋಮವಾರ ಕಾಂಗ್ರೆಸ್ ಮುಖಂಡರೇ ಬಿಗ್ ಶಾಕ್ ನೀಡಿದ್ದು, ಮುಂದಿನ ಬಾರಿ ಅವರಿಗೆ ಟಿಕೆಟ್ ನೀಡಬೇಡಿ ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್(ಕೆಪಿಸಿಸಿ) ಅಧ್ಯಕ್ಷರಿಗೆ ದೂರು ನೀಡಿದ್ದಾರೆ.



ಶಾಸಕ ಪ್ರದೀಪ್ ಈಶ್ವರ್ ಅವರ ಕಾರ್ಯವೈಖರಿ, ಪಕ್ಷ ಸಂಘಟನೆ ಹಾಗೂ ಸ್ಥಳೀಯ ಚುನಾವಣೆಗಳ ಕುರಿತು ಹಲವು ಅಹವಾಲುಗಳನ್ನು ಕೆಪಿಸಿಸಿ ಅಧ್ಯಕ್ಷರಿಗೆ ಸಲ್ಲಿಸಲಾಗಿದೆ ಎಂದು ತಿಳಿದುಬಂದಿದೆ. ಪ್ರದೀಪ್ ಈಶ್ವರ್ ಕ್ಷೇತ್ರಕ್ಕೆ ಸರಿಯಾಗಿ ಬರುತ್ತಿಲ್ಲ. ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರ ಕರೆಗಳಿಗೆ ಸರಿಯಾಗಿ ಸ್ಪಂದಿಸುತ್ತಿಲ್ಲ ಎಂದು ಆರೋಪಗಳ ಸುರಿಮಳೆ ಸುರಿಸಿದ್ದಾರೆ. ನಿಷ್ಠಾವಂತ ಕಾರ್ಯಕರ್ತರಿಗೆ ನಾಮನಿರ್ದೇಶನ ಸ್ಥಾನಗಳನ್ನು ನೀಡುತ್ತಿಲ್ಲ. ಸ್ಥಳೀಯ ಚುನಾವಣೆಗಳಲ್ಲಿ ಶಾಸಕರು ಸಕ್ರಿಯವಾಗಿ ತೊಡಗಿಸಿಕೊಳ್ಳುತ್ತಿಲ್ಲ. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಹಿನ್ನಡೆಯಾಗಿದೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಎಲ್ಲ ವಿಚಾರಗಳನ್ನು ಕೆಪಿಸಿಸಿ ಅಧ್ಯಕ್ಷರ ಗಮನಕ್ಕೆ ತರಲಾಗಿದ್ದು, ಮುಂದಿನ ಚುನಾವಣೆಯಲ್ಲಿ ಪ್ರದೀಪ್ ಈಶ್ವರ್‌ಗೆ ಟಿಕೆಟ್ ನೀಡಬಾರದು ಎಂದು ಮುಖಂಡರು ಒತ್ತಾಯಿಸಿದ್ದಾರೆ.

ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆ । ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ

# ನೈತಿಕ ಹೊಣೆ ಹೊತ್ತು ಮೋದಿ ರಾಜೀನಾಮೆ ನೀಡಲಿ

**ನವದೆಹಲಿ:** ಕಾಂಗ್ರೆಸ್ ಕಾರ್ಯಕಾರಿ ಸಮಿತಿ (CWC) ಸಭೆಯಲ್ಲಿ ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿರುವ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು, ಮುಖ್ಯ ಚುನಾವಣಾ ಆಯುಕ್ತರ ಮೇಲೆ ಒತ್ತಡ ಹೇರುತ್ತಿರುವ ಪ್ರಧಾನಿ ಮೋದಿ ಅವರು ತಕ್ಷಣವೇ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಮತ್ತು ಮುಖ್ಯ ಚುನಾವಣಾ ಆಯುಕ್ತ (CEC) ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿದ್ದಾರೆ.

ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಸ್ವತಂತ್ರ ಸಂಸ್ಥೆಯಾಗಿದ್ದ ಚುನಾವಣಾ ಆಯೋಗವನ್ನು ಆಡಳಿತಾರೂಢ ಬಿಜೆಪಿ ಸರ್ಕಾರದ "ಕೈಗೊಂಬೆ"ಯನ್ನಾಗಿ ಮಾಡಿಕೊಳ್ಳಲಾಗಿದೆ ಎಂದು ಗಂಭೀರ ಆರೋಪ ಮಾಡಿದರು. ಇದೇ ವೇಳೆ ಜ್ಞಾನೇಶ್ ಕುಮಾರ್ ಹಾಗೂ ಕೇಂದ್ರ ಸರ್ಕಾರದ ವಿರುದ್ಧ ಪಕ್ಷದ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸುವುದಾಗಿ ಹೇಳಿದರು.

ಈ ವಿಷಯದ ಕುರಿತು ಬೀದಿಗಿಳಿದು ಹೋರಾಟ ನಡೆಸುವುದರ ಜತೆಗೆ ಸಂಸತ್ತಿನಲ್ಲೂ ಮತದಾರರ ಪಟ್ಟಿ ಮತ್ತು ಚುನಾವಣಾ ಪ್ರಕ್ರಿಯೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ಧ್ವನಿ ಎತ್ತುವುದಾಗಿ ತಿಳಿಸಿದರು.

ಇದರ ಜತೆಗೆ, ಸಿಇಸಿ ಮೇಲೆ 'ಒತ್ತಡ ಹೇರಿದ' ಆರೋಪದ ಹಿನ್ನೆಲೆಯಲ್ಲಿ ಪ್ರಧಾನಿ ಕೂಡ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಖರ್ಗೆ ಆಗ್ರಹಿಸಿದರು. ಎಸ್‌ಐಆರ್ ಪ್ರಕ್ರಿಯೆಯ ಕೆಲವು ಅಂಶಗಳು, ಫಾರ್ಮ್-6ರಲ್ಲಿ ಮಾಡಲಾದ ಬದಲಾವಣೆಗಳು, ಮತದಾರರ ಪಟ್ಟಿಗೆ ಹೆಸರುಗಳ ಸೇರ್ಪಡೆ-ತೆಗೆದುಹಾಕುವಿಕೆ ಹಾಗೂ ಮತದಾರರ ಪಟ್ಟಿಯ ದತ್ತಾಂಶದ ನಿಯಂತ್ರಣ ಕುರಿತು ಚುನಾವಣಾ ಆಯೋಗದೊಳಗೆ ಭಿನ್ನಾಭಿಪ್ರಾಯಗಳಿವೆ ಎಂಬ ವರದಿಗಳ ನಡುವೆಯೇ ಖರ್ಗೆ ಈ ಹೇಳಿಕೆ ನೀಡಿದ್ದಾರೆ.

'ಇಂಡಿಯನ್ ಎಕ್ಸ್‌ಪ್ರೆಸ್' ವರದಿ ಪ್ರಕಾರ, ಚುನಾವಣಾ ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರು ಎಸ್‌ಐಆರ್‌ಗೆ ಸಂಬಂಧಿಸಿದ ಕೆಲವು ನಿರ್ಧಾರಗಳು ಮತ್ತು ಆದೇಶಗಳ ಕುರಿತು 10 ತಿಂಗಳಲ್ಲಿ ಕನಿಷ್ಠ 14 ಬಾರಿ ಆಕ್ಷೇಪ ದಾಖಲಿಸಿದ್ದರು. ಈ ನಿರ್ಧಾರಗಳು ತಮ್ಮ ಅರಿವು ಅಥವಾ ಶಿಫಾರಸಿಲ್ಲದೆ ಹೊರಬಂದಿದ್ದವು ಎಂದು ಅವರು ಆಕ್ಷೇಪ ವ್ಯಕ್ತಪಡಿಸಿದ್ದರು.




ಆದರೆ, ಚುನಾವಣಾ ಆಯೋಗವು ತನ್ನೊಳಗೆ ಯಾವುದೇ ಬಿರುಕು ಇದೆ ಎಂಬ ವರದಿಗಳನ್ನು ತಳ್ಳಿಹಾಕಿದೆ. ಬಹುಸದಸ್ಯ ಆಯೋಗದಲ್ಲಿ ಚರ್ಚೆಯ ವೇಳೆ ಭಿನ್ನ ಅಭಿಪ್ರಾಯಗಳು ಮತ್ತು ಅಭಿಪ್ರಾಯ ಸೂಚನೆಗಳು ಸಾಮಾನ್ಯ ಪ್ರಕ್ರಿಯೆಯ ಭಾಗವಾಗಿದ್ದು, ಆಯೋಗದ ಆದೇಶಗಳಿಗೆ ಸಂಪೂರ್ಣ ಕಾನೂನು ಮಾನ್ಯತೆ ಇದೆ ಎಂದು ಸ್ಪಷ್ಟಪಡಿಸಿದೆ. ಎಸ್‌ಐಆರ್‌ಗೆ ಸಂಬಂಧಿಸಿದ ನಿರ್ಧಾರಗಳನ್ನು ಸರ್ವಾನುಮತದಿಂದ ಕೈಗೊಳ್ಳಲಾಗಿದೆ ಎಂದು ಆಯೋಗ ಹೇಳಿದೆ.

ಖರ್ಗೆ ಅಧ್ಯಕ್ಷತೆಯಲ್ಲಿ ನಡೆದ ಸಿಡಬ್ಲ್ಯುಸಿ ಸಭೆಯಲ್ಲಿ ಪಕ್ಷದ ಮಾಜಿ ಅಧ್ಯಕ್ಷರಾದ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ, ಪ್ರಧಾನ ಕಾರ್ಯದರ್ಶಿಗಳಾದ ಪ್ರಿಯಾಂಕಾ ಗಾಂಧಿ ವಾದ್ರಾ, ಜೈರಾಮ್ ರಮೇಶ್ ಮತ್ತು ಕೆ.ಸಿ. ವೇಣುಗೋಪಾಲ್ ಸೇರಿದಂತೆ ಹಲವು ನಾಯಕರು ಭಾಗವಹಿಸಿದ್ದಾರೆ. ಮತದಾರರ ಪಟ್ಟಿಯಲ್ಲಿನ ಅಕ್ರಮಗಳ ಕುರಿತು ನಿರಂತರವಾಗಿ ಆರೋಪಗಳನ್ನು ಮಾಡುತ್ತಿರುವ ರಾಹುಲ್ ಗಾಂಧಿ ಅವರ ಬೆಂಬಲಕ್ಕೆ ನಿಂತಿರುವ ಕಾಂಗ್ರೆಸ್ ನಾಯಕರು ಮತ್ತು ಕಾರ್ಯಕರ್ತರಿಗೆ ಖರ್ಗೆ ಧನ್ಯವಾದ ತಿಳಿಸಿದ್ದಾರೆ. ಎಸ್‌ಐಆರ್ ವಿಚಾರದಲ್ಲಿ ಇತರ ವಿರೋಧ ಪಕ್ಷಗಳೊಂದಿಗೆ ಜಂಟಿ ಹೋರಾಟ ನಡೆಸಲು ಕಾಂಗ್ರೆಸ್ ಮುಂದಾಗಿದೆ. ಈ ಕುರಿತು ಜಂಟಿ ಕಾರ್ಯತಂತ್ರ ರೂಪಿಸಲು ಇಂಡಿಯಾ ಮೈತ್ರಿಕೂಟದ ನಾಯಕರು ಬುಧವಾರ ಸಭೆ ಸೇರಲಿದ್ದಾರೆ. ಜ್ಞಾನೇಶ್ ಕುಮಾರ್ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂಬ ಬೇಡಿಕೆಯೂ ಸಭೆಯ ಪ್ರಮುಖ ವಿಚಾರವಾಗಲಿದೆ.

# ಬಿಜೆಪಿಗೆ ಹೋಗುವವರನ್ನು ವಾಷಿಂಗ್ ಮಷಿನ್‌ಗೆ ಹಾಕಿದರೆ ಎಲ್ಲವೂ ಕ್ಲೀನ್ ಆಗುತ್ತದೆ

**ಕಾರವಾರ:** ಯಾರೆಲ್ಲಾ ಬಿಜೆಪಿಗೆ ಹೋಗುತ್ತಾರೋ ಅವರನ್ನು ವಾಷಿಂಗ್ ಮಿಷನ್‌ಗೆ ಹಾಕಿದರೆ ಎಲ್ಲವೂ ಕ್ಲೀನ್ ಆಗುತ್ತದೆ. ನನ್ನನ್ನೂ ವಾಷಿಂಗ್ ಮಷಿನ್‌ನಲ್ಲಿ ಹಾಕಿದ್ದರು ಎಂದು ಬಿಜೆಪಿ ಉಚ್ಚಾಟಿತ ಯಲ್ಲಾಪುರ ಶಾಸಕ ಶಿವರಾಮ ಹೆಬ್ಬಾರ ವ್ಯಂಗ್ಯವಾಡಿದರು .



ಸೋಮವಾರ ಕೇಂದ್ರ ಚುನಾವಣಾ ಆಯುಕ್ತರ ವಿರುದ್ಧ ಕಾಂಗ್ರೆಸ್ ಆಯೋಜಿಸಿದ್ದ ಪ್ರತಿಭಟನೆಯಲ್ಲಿ ಮೊದಲ ಬಾರಿಗೆ ಮುಕ್ತವಾಗಿ ಪಾಲ್ಗೊಂಡರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಬಿಜೆಪಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ಸಿಬಿಐ, ಇಡಿ ಹಾಗೂ ಚುನಾವಣಾ ಆಯೋಗ ಸೇರಿದಂತೆ ತನಿಖಾ ಸಂಸ್ಥೆಗಳನ್ನು ಬಿಜೆಪಿ ದುರುಪಯೋಗಪಡಿಸಿಕೊಳ್ಳುತ್ತಿದೆ. ಕೇಂದ್ರ ಚುನಾವಣಾ ಆಯೋಗ ನಡೆಸುತ್ತಿರುವ ನೀತಿಯು ಪ್ರಜಾಪ್ರಭುತ್ವದ ಕಗ್ಗೊಲೆಯಾಗಿದೆ. ಚುನಾವಣಾ ಆಯೋಗದ ಅಧಿಕಾರಿಗಳು ಸಭೆ ಸೇರಿಲ್ಲ, ಅವರನ್ನು ತಗೊಂಡು ಹೋಗಿ ಕೂರಿಸಿದ್ದಾರೆ. ರಾಜಕೀಯ ಪಕ್ಷದಲ್ಲಿ ಭಿನ್ನಾಭಿಪ್ರಾಯ ಇದ್ದಾಗ ಪತ್ರಿಕಾಗೋಷ್ಠಿ ಮಾಡಿಸಿದಂತೆ ಇದು ಎಂದರು. ಸಿಬಿಐ, ಇಡಿ, ಚುನಾವಣಾ ಆಯೋಗವನ್ನು ಬಿಜೆಪಿಯು ಜೇಬಲ್ಲಿಇಟ್ಟುಕೊಂಡು ಕೆಲಸ ಮಾಡಿಕೊಂಡು ಹೋದರೆ ಎಲ್ಲವೂ ಕಾಂಗ್ರೆಸ್ ಮೇಲೆಯೇ ದಬ್ಬಾಳಿಕೆಯಾಗುತ್ತದೆ. ಸತೀಶ್ ಸೈಲ್, ಜಾರಕಿಹೊಳಿ ಸೇರಿದಂತೆ ಕಾಂಗ್ರೆಸ್‌ನ ಮುಖ್ಯಮಂತ್ರಿ, ಸಚಿವರು ಹಾಗೂ ಶಾಸಕರ ಮೇಲ ರೇಡ್‌ಗಳು ನಡೆಯುತ್ತವೆ. ಬಿಜೆಪಿಗರು ಎಲ್ಲರೂ ದೇಶದಲ್ಲಿ ಹರಿಶ್ಚಂದ್ರರು, ಕಾಂಗ್ರೆಸ್‌ನವರು ಮಾತ್ರ ಕಳ್ಳರು ಎನ್ನುವ ರೀತಿಯಾಗಿದೆ ಎಂದು ವ್ಯಂಗ್ಯವಾಡಿದರು.

ಸಮಾಲೋಚನೆ ಸುದ್ದಿ
SAMALOCHANE RANEBENNURSUDDI
Kannada Daily Morning

# ಚೆನ್ನಾಗಿ ಓದಲು ಹೇಳಿದ್ದಕ್ಕೆ ಬಾಲಕ ಆತ್ಮಹತ್ಯೆ?

## ಮಲ್ಲೂರಿನಲ್ಲಿ ಮನಕಲಕುವ ಘಟನೆ; 16ರ ಹರೆಯದಲ್ಲೇ ಬದುಕಿಗೆ ವಿದಾಯ

**ಸಮಾಲೋಚನೆ ಸುದ್ದಿ ಬ್ಯಾಡಗಿ**

ಎಸ್ಸೆಸ್ಸೆಲ್ಸಿ ಪರೀಕ್ಷೆ ಜೀವನ ಪ್ರಮುಖ ಘಟ್ಟ, ಟಿವಿ, ಮೋಬೈಲ್ ಜಾಸ್ತಿ ನೋಡಬೇಡ ಚೆನ್ನಾಗಿ ಓದಬೇಕು, ಜೀವನದಲ್ಲಿ ಎನನ್ನಾ ದರು ಸಾಧಿಸಿ ಉತ್ತಮವಾಗಿ ಬೆಳೆಯಬೇಕು ಎಂದು ಪೋಷಕರು ಬುದ್ದಿ ಹೇಳಿದ್ದಕ್ಕೆ ಮನನೊಂದು ಬಾಲಕನೋರ್ವ ಆತ್ಮಹತ್ಯೆಗೆ ಶರಣಾದ ಘಟನೆ ತಾಲೂಕಿನ ಮಲ್ಲೂರ ಗ್ರಾಮದಲ್ಲಿ ಸೋಮವಾರ ತಡರಾತ್ರಿ ನಡೆದಿದೆ.

ಮೃತ ಬಾಲಕನನ್ನು ಮಲ್ಲೂರ ಗ್ರಾಮದ ಹರ್ಷ ರಮೇಶ ಮೋರೆ (16) ಎಂದು ಗುರುತಿಸಲಾಗಿದೆ. ಸೋಮವಾರ ರಾತ್ರಿ ಸುಮಾರು 10.30ರ ವೇಳೆಗೆ ಘಟನೆ ನಡೆದಿದೆ ಎನ್ನಲಾಗಿದ್ದು, ಮನೆಯ ಮೇಲಿನ ಕೊಠಡಿ ಒಳಗೆ ಬಾಲಕ ನೇಣು ಬಿಗಿದುಕೊಂಡು ಆತ್ಮ ಹತ್ಯೆ ಮಾಡಿಕೊಂಡಿರುವುದಾಗಿ ತಿಳಿದುಬಂದಿದೆ. ಮನೆಯವರ ನಿರೀಕ್ಷೆ, ಓದಿನ ಒತ್ತಡ ಅಥವಾ ಬೇರೆ ಯಾವುದಾದರೂ ಕಾರಣ ಘಟನೆಗೆ ಕಾರಣವಾಗಿದೆಯೇ ಎಂಬುದು ತನಿಖೆಯಿಂದಷ್ಟೇ ಸ್ಪಷ್ಟವಾಗಬೇಕಿದೆ.

ಮುಗಿಲು ಮುಟ್ಟಿದ ಆಕ್ರಂದನ: ಚಿಕ್ಕ ವಯಸ್ಸಿನಲ್ಲೇ ಮಗನನ್ನು ಕಳೆದುಕೊಂಡ ಕುಟುಂಬದ ಆಕ್ರಂದನ ಮುಗಿಲು ಮುಟ್ಟಿದ್ದು, ಗ್ರಾಮದಲ್ಲಿ ಶೋಕದ ವಾತಾವರಣ ನಿರ್ಮಾಣವಾಗಿದೆ, ನಿನ್ನೆವರೆಗೂ ಮನೆಯಂಗಳದಲ್ಲಿಓಡಾಡಿಕೊಂಡಿದ್ದ,ಭವಿಷ್ಯದಕನಸುಕಾಣಬೇಕಿದ್ದ14ರ ಹರೆಯದ ಬಾಲಕ ಇಂದು ಇಲ್ಲದಿರುವುದು ಕುಟುಂಬಸ್ಥರು ಹಾಗೂ ಗ್ರಾಮಸ್ಥರನ್ನು ಕಣ್ಣೀರಿನಲ್ಲಿ ಮುಳುಗಿಸಿದೆ.

ಒತ್ತಡ ಹಾಕುವುದು ಸರಿಯೇ:ಮಕ್ಕಳ ಮೇಲೆ ಉತ್ತಮ ಭವಿಷ್ಯದ ನಿರೀಕ್ಷೆ ಇಟ್ಟುಕೊಳ್ಳುವುದು ಸಹಜ. ಆದರೆ ಮಕ್ಕಳ ಮನಸ್ಸಿನ ಮೇಲೆ ಓದು, ಅಂಕಗಳು ಹಾಗೂ ನಿರೀಕ್ಷೆಗಳ ಒತ್ತಡ ಎಷ್ಟರ ಮಟ್ಟಿಗೆ ಪರಿಣಾಮ ಬೀರುತ್ತಿದೆ ಎಂಬುದರ ಬಗ್ಗೆ ಪೋಷಕರು ಹಾಗೂ ಸಮಾಜ ಗಂಭೀರವಾಗಿ ಚಿಂತಿಸಬೇಕಾದ ಅಗತ್ಯವಿದೆ. ಮಕ್ಕಳೊಂದಿಗೆ ಕೇವಲ ಓದಿನ ಬಗ್ಗೆ ಮಾತನಾಡುವುದಕ್ಕಿಂತ, ಅವರ ಮನಸ್ಸಿನ ಮಾತು ಕೇಳುವುದು, ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳುವುದು ಹಾಗೂ ಅಗತ್ಯವಿದ್ದಾಗ ಮಾನಸಿಕ ಬೆಂಬಲ ನೀಡುವುದು ಅತ್ಯಂತ ಮುಖ್ಯವಾಗಿದೆ. ಘಟನೆ ಕುರಿತಂತೆ ಬ್ಯಾಡಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ತನಿಖೆ ಮುಂದುವರೆದಿದೆ.

# ಹರಿಹರದಲ್ಲಿ ಹವ್ಯಾಸಿ ಗಾಯಕರಿಗೆ ಗೌರವ ಸನ್ಮಾನ




**ಹರಿಹರ:** ನಗರದ ಶ್ರೀ ಸಾರ್ವಜನಿಕ ವಿನಾಯಕ ಸಂಘದ ವತಿಯಿಂದ 64ನೇ ಗಣೇಶೋತ್ಸವದ ಪ್ರಯುಕ್ತ ಕೇದಾರನಾಥ್ ಶೈಲಿಯಲ್ಲಿ ಭವ್ಯ ಮಂಟಪ ನಿರ್ಮಿಸಿ, ವಿವಿಧ ಕಲಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.

ಇದರ ಅಂಗವಾಗಿ ಹರಿಹರ ನಗರದ ವಿಜಯನಗರಬಡಾವಣೆಯಹವ್ಯಾಸಿಗಾಯಕ-ರಿಂದ ವಿಶೇಷ ರಸಮಂಜರಿ ಕಾರ್ಯಕ್ರಮ ನಡೆಯಿತು. ಗಾಯಕರ ಸುಮಧುರ ಗಾಯನಕ್ಕೆ ನೆರೆದಿದ್ದ ಭಕ್ತರು ಹಾಗೂ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಬಳಿಕ ಶ್ರೀ ಸಾರ್ವಜನಿಕ ವಿನಾಯಕ ಸಂಘದ ವತಿಯಿಂದ ರಸಮಂಜರಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಹವ್ಯಾಸಿ ಗಾಯಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳು, ಸದಸ್ಯರು, ಕಲಾಭಿಮಾನಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಶ್ರೀ ಸಾರ್ವಜನಿಕ ವಿನಾಯಕ ಸಂಘ ಗೌರವ ಅಧ್ಯಕ್ಷರಾದ ಶ್ರೀನಿವಾಸ ನಂದಿಗಾವಿ ಅಧ್ಯಕ್ಷರಾದ ವಿಜಯ್ ಕುಮಾರ್ ಸಚಿನ್ ಕೊಂಡ್ಡಜಿ, ಸಂತೋಷ್ ನೋಟದವರ, ಸೇರಿದಂತೆ ಇನು ಅನೇಕ ಸದಸ್ಯರು ಪದಾಧಿಕಾರಿಗಳು ಉಪಸ್ಥಿತಿ ಇದ್ದರು.

**ನವಲಗುಂದದಲ್ಲಿ ಬೆಳಕಿಲ್ಲದ ರುದ್ರಭೂಮಿ**

# ಮೊಬೈಲ್ ಟಾರ್ಚ್‌ನಲ್ಲೇ ಅಂತ್ಯಸಂಸ್ಕಾರ

**ನವಲಗುಂದ:** ಪಟ್ಟಣದ ಶಂಕರ ಕಾಲೇಜ್ ಪಕ್ಕದಲ್ಲಿರುವ ರುದ್ರಭೂಮಿಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಎದ್ದು ಕಾಣುತ್ತಿದೆ. ಕಳೆದ ಹಲವು ತಿಂಗಳುಗಳಿಂದ ವಿದ್ಯುತ್ ದೀಪದ ವ್ಯವಸ್ಥೆಯೇ ಇಲ್ಲದೆ, ರಾತ್ರಿ ವೇಳೆ ಮೃತರ ಅಂತ್ಯಸಂಸ್ಕಾರ ಮಾಡಲು ಜನರು ಮೊಬೈಲ್ ಟಾರ್ಚ್ ಮೊರೆ ಹೋಗುವ ದುಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಧಾರವಾಡ ಜಿಲ್ಲೆ ನವಲಗುಂದ ಪಟ್ಟಣದ ಶಂಕರ ಕಾಲೇಜ್ ಪಕ್ಕದ ರುದ್ರಭೂಮಿ. ಈ ರುದ್ರಭೂಮಿ ಈಗ ಅಕ್ಷರಶಃ ಕತ್ತಲ ಕೂಪವಾಗಿ ಮಾರ್ಪಟ್ಟಿದೆ. ಸಂಜೆ ಆರು ಗಂಟೆ ಆದ್ರೆ ಸಾಕು, ಇಲ್ಲಿ ಕತ್ತಲು ಆವರಿಸಿಕೊಳ್ಳುತ್ತೆ. ಯಾಕಂದ್ರೆ ಇಲ್ಲಿ ಒಂದೇ ಒಂದು ವಿದ್ಯುತ್ ದೀಪ ಕೂಡ ಸರಿಯಾಗಿ ಉರಿಯುತ್ತಿಲ್ಲ. ಇದರಿಂದ ರಾತ್ರಿ ವೇಳೆ ಶವ ಸಂಸ್ಕಾರಕ್ಕೆ ಬರುವ ಜನರು ಮೊಬೈಲ್ ಟಾರ್ಚ್ ಬೆಳಕಿನಲ್ಲಿ ಕಾರ್ಯ ನಡೆಸಬೇಕಾದ ಅನಿವಾರ್ಯತೆ ಎದುರಾಗಿದೆ.

ಇದು ಕೇವಲ ಲೈಟ್ ಸಮಸ್ಯೆ ಮಾತ್ರವಲ್ಲ. ಇಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ, ಸ್ವಚ್ಛತೆ ಇಲ್ಲ. ರುದ್ರಭೂಮಿಯ ಸುತ್ತಮುತ್ತ ಬೆಳೆದಿರುವ ಮುಳ್ಳು ಕಂಠಿಗಳು, ಹಾಳಾಗಿ ಬಿದ್ದಿರುವ ಶೆಡ್, ಮಳೆ ಬಂದರೆ ನಿಲ್ಲಲು ಜಾಗವಿಲ್ಲದಂತಾಗಿದೆ. ಮೃತರ ಕುಟುಂಬಸ್ಥರು ಕೊನೆಯ ವಿಧಿವಿಧಾನವನ್ನು ಗೌರವಯುತವಾಗಿ ಮಾಡಲು ಕೂಡ ಸಾಧ್ಯವಾಗುತ್ತಿಲ್ಲ ಅನ್ನೋದು ಸ್ಥಳೀಯರ ಆರೋಪ. ಪುರಸಭೆಗೆ ಅದಿಕಾರಿಗಳು ಯಾರೂ ಕೂಡ ಬಂದು ನೋಡಿಲ್ಲ. ರಾತ್ರಿ ಹೆಣ ತಂದರೆ ಮೊಬೈಲ್ ಟಾರ್ಚ್ ನಲ್ಲಿ ಸಂಸ್ಕಾರ ಮಾಡಬೇಕು. ಸತ್ತವರಿಗಾದರೂ ಗೌರವ ಕೊಡಬೇಕು ಅಧಿಕಾರಿಗಳು ಕೂಡಲೇ ಎಚ್ಚೆತ್ತುಕೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ

ಒಟ್ಟಿನಲ್ಲಿ ಸರ್ಕಾರ ಸ್ಮಶಾನಗಳ ಅಭಿವೃದ್ಧಿಗೆ ಕೋಟಿ ಕೋಟಿ ಅನುದಾನ ಬಿಡುಗಡೆ ಮಾಡುತ್ತಿದ್ದರೂ, ನವಲಗುಂದದ ರುದ್ರಭೂಮಿಗೆ ಮಾತ್ರ ಇನ್ನೂ ಬೆಳಕು ಬಂದಿಲ್ಲ. ಪುರಸಭೆ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಮೂಲಭೂತ ಸೌಕರ್ಯ ಕಲ್ಪಿಸಬೇಕೆಂಬುದು ನಾಗರಿಕರ ಒತ್ತಾಯವಾಗಿದೆ.



# ಸವಣೂರು ಪ್ರತ್ಯೇಕ ವಿಧಾನಸಭಾ ಕ್ಷೇತ್ರಕ್ಕಾಗಿ ಪ್ರತಿಭಟನೆ

**ಸಮಾಲೋಚನೆ ಸುದ್ದಿ ಸವಣೂರು**

ಸವಣೂರು ತಾಲ್ಲೂಕು ಪ್ರತ್ಯೇಕ ವಿಧಾನಸಭಾ ಕ್ಷೇತ್ರವನ್ನು ಮಾಡುವಂತೆ ಒತ್ತಾಯಿಸಿ ಪಟ್ಟಣದಲ್ಲಿ ಸವಣೂರು ತಾಲ್ಲೂಕು ಪ್ರತ್ಯೇಕ ವಿಧಾನ ಸಭಾ ಕ್ಷೇತ್ರ ಹೋರಾಟ ಸಮಿತಿ ಹಾಗೂ ತಾಲ್ಲೂಕಿನ ಮಹಾಜನತೆಯಿಂದ ಬೃಹತ್ ಪ್ರತಿಭಟನೆ ಮೆರವಣಿಗೆ ಮಾಡಿ ಕೇಂದ್ರ ಸರ್ಕಾರ ಹಾಗೂ ಚುನಾವಣಾ ಆಯೋಗಕ್ಕೆ ಉಪವಿಭಾಗಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಯಿತು.

ಪಟ್ಟಣದ ದೊಡ್ಡ ಹುಣಸೆ ಕಲ್ಮಠದಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ವಿ.ಕೃ. ಗೋಕಾಕ್ ವೃತ್ತ, ಡಾ. ಬಿ.ಆರ್. ಅಂಬೇಡ್ಕರ್ ವೃತ್ತ, ಸಿಂಪಿಗಲ್ಲಿ, ಮುಖ್ಯ ಮಾರುಕಟ್ಟೆ ಹಾಗೂ ಅಂಚೆ ಕಚೇರಿ ಮಾರ್ಗವಾಗಿ ಸಾಗಿ ತಹಸೀಲ್ದಾರ್ ಕಚೇರಿಯನ್ನು ತಲುಪಿತು. ಅಲ್ಲಿ ಕೆಲಕಾಲ ಪ್ರತಿಭಟನೆ ನಡೆಸಲಾಯಿತು.

ಪ್ರತ್ಯೇಕವಿಧಾನಸಭಾಕ್ಷೇತ್ರಹೋರಾಟಕ್ಕೆಬೆಂಬಲವಾಗಿ ಮಾತನಾಡಿದ ಶಿರಹಟ್ಟಿಯ ಫಕ್ಕೀರದಿಂಗಾಲೇಶ್ವರ ಸ್ವಾಮೀಜಿಗಳು ಈ ಬೇಡಿಕೆಯನ್ನು ಹಲವು ವರ್ಷಗಳ ಹಿಂದೆಯೇ ಈಡೇರಿಸಬೇಕಿತ್ತು. ಆದರೆ ರಾಜಕೀಯ ಮುಖಂಡರ ಇಚ್ಛಾಶಕ್ತಿಯ ಕೊರತೆಯಿಂದಾಗಿ ಸ್ಥಳೀಯ ಜನತೆಗೆ ಮಲತಾಯಿ ಧೋರಣೆ ತೇ-ೂರಿದಂತಾಗಿದೆ.ಇದುನಮ್ಮಹಕ್ಕು.ಸವಣೂರುಪ್ರತ್ಯೇಕ ವಿಧಾನಸಭಾ ಕ್ಷೇತ್ರವಾಗುವವರೆಗೂ ಈ ಹೋರಾಟ ಯಾವುದೇ ಕಾರಣಕ್ಕೂ ನಿಲ್ಲುವುದಿಲ್ಲ ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.ನಾವು ಯಾವುದೇ ರೀತಿಯ ಪ್ರತ್ಯೇಕತೆಯ ಘೋಷಣೆ ಕೂಗುತ್ತಿಲ್ಲ.ನಮಗೆ ನ್ಯಾಯಸಮ್ಮತವಾಗಿ ದೊರೆಯಬೇಕಾದ ಸವಣೂರು ವಿಧಾನಸಭಾ ಕ್ಷೇತ್ರವನ್ನು ಪ್ರತ್ಯೇಕಗೊಳಿಸಿ,ಈ ಭಾಗವನ್ನುಅಭಿವೃದ್ಧಿಯಪಥದಲ್ಲಿಮುನ್ನಡೆಸುವುದೇ ನಮ್ಮ ಗುರಿ. ಉಪವಿಭಾಗಾಧಿಕಾರಿಗಳು ನಾವು ಸಲ್ಲಿಸಿರುವ ಮನವಿಯನ್ನು ಸರ್ಕಾರಕ್ಕೆ ತಲುಪಿಸುವ ಕೆಲಸ ಮಾಡಬೇಕು ಎಂದು ಆಗ್ರಹಿಸಿದರು.

ಸಮಿತಿಯ ಅಧ್ಯಕ್ಷ ಎಸ್.ವಿ. ಪಾಟೀಲ ಮಾತನಾಡಿ ಸವಣೂರು ಪಟ್ಟಣ ಸೇರಿದಂತೆ ಸುಮಾರು 65 ಹಳ್ಳಿಗಳು ಈ ತಾಲ್ಲೂಕಿನಲ್ಲಿವೆ. ಸುಮಾರು 1.80ಲಕ್ಷ ಜನಸಂಖ್ಯೆ ಇದೆ. ಹೀಗಾಗಿ ಸವಣೂರು ಪ್ರತೆ-ೄಕ ವಿಧಾನಸಭಾ ಕ್ಷೇತ್ರವಾಗುವಲ್ಲಿ ಯಾವುದೇ ಸಮಸ್ಯೆ ಉದ್ಭವಿಸುವುದಿಲ್ಲ. ಕ್ಷೇತ್ರ ಪ್ರತ್ಯೇಕಗೊಂಡ-ರೆ ಅಭಿವೃದ್ಧಿಯತ್ತ ಸಾಗಲು ಸಾಧ್ಯವಾಗುತ್ತದೆ ಎಂದರು.ಸಮಿತಿಯಗೌರವಾಧ್ಯಕ್ಷರಾದಶ್ರೀಚನ್ನಬಸವ ಮಹಾಸ್ವಾಮೀಜಿ ಹಾಗೂ ಹತ್ತಿಮತ್ತೂರಿನ ನಿಜಗುಣ ಶಿವಯೋಗಿ ಸ್ವಾಮೀಜಿ ಮಾತನಾಡಿ ಅಭಿವೃದ್ಧಿಗಾಗಿ ಪ್ರತ್ಯೇಕ ವಿಧಾನ ಸಭಾ ಕ್ಷೇತ್ರ ಮಾಡುವಂತೆ ಹೋರಾಟ ಮಾಡಲಾಗಿತ್ತಿದೆ. ಇದಕ್ಕೆ ಬೆಂಬಲ ಹಾಗೂ ಸಹಕಾರ ನೀಡಿದ ಎಲ್ಲರಿಗೂ ಧನ್ಯವಾದಗಳು. ಹೋರಾಟ ನಮ್ಮ ಬೇಡಿಕೆ ಈಡೇರಿಕೆಯಾಗುವವರಿಗೂ ಮುಂದುವರಿಯಲಿ ಎಂದರು.ಈ ಸಂದರ್ಭದಲ್ಲಿ ಸಮಿತಿಯ ಪ್ರಧಾನ ಕಾರ್ಯದರ್ಶಿ ಎ.ಸಿ.ಹಿರೇಮಠ ಉಪಾಧ್ಯಕ್ಷ ಧರಿಯಪ್ಪಗೌಡ ಪಾಟೀಲ್ ,ಮುಖಂಡರಾದ ಶಿವಪುತ್ರಪ್ಪ ಸಪಗಾಯಿ, ಬಿ.ಎಮ್ .ಪಾಟೀಲ್ , ಸುಭಾಸ ಮಜ್ಜಗಿ, ಬಸವರಾಜ ಸವೂರ ,ಶೋಭಾ ನಿಸ್ಸೀಮಗೌಡ್ರ, ರಾಜೇಶ್ವರಿ ಬುಶೆಟ್ಟಿ,ನವೀನ ಬಂಡಿವಡ್ಡರ,ಸತೀಶ ಗೌಳಿ,ಲಕ್ಷ್ಮಣ ಕನವಳ್ಳಿ,ಆನಂದ ವಡಕಮ್ಮನವರ,ಬಸವರಾಜ ಮೈಲಮ್ಮನವರ, ಪರಶುರಾಮ ಈಳಿಗೇರ,ಚನ್ನಪ್ಪಮರಡೂರ,ಕುಮಾರ ಯಲವಿಗಿ,ಮಹೇಶ ಅಪ್ಪಣ್ಣನವರ,ನಿಂಗಪ್ಪ ಆರೇರ,ಶ್ರೀಕಾಂತ ಅಜ್ಜಣ್ಣನವರ,ಮಂಜುನಾಥ ಮೆಳಳ್ಳಿ, ಕಾಂತೇಶ ವಾಲ್ಮೀಕಿ, ಸಂತೋಷಗೌಡ ದೊಡ್ಮನಿ, ಎನ್ .ಎಂ .ಮಲ್ಲೂರ,ಮಂಜಪ್ಪ ಲಮಾಣಿ,ಪ್ರಕಾಶ ಲಮಾಣಿ,ರವಿರಾಜಗೌಡ ಪಾಟೀಲ ,ರಾಜು ಕುಮರಿ, ವಿನಯ ಬುಶೆಟ್ಟಿ,ಸಮೀತ ಕೆಮ್ಮಣಕೇರಿ,ಕಲ್ಪವೃಕ್ಷ ಮಹಿಳಾ ಮಂಡಳಿ ಅಧ್ಯಕ್ಷರು ವಿದ್ಯಾವತಿ ಮಠಪತಿ, ವೆಂಕಮ್ಮ ಹೊಳೆಮ್ಮನವರ, ರೂಪಾ ಲಮಾಣಿ, ವಿದ್ಯಾವತಿ ಕೋಳಿವಾಡ,ಪುಷ್ಪ ಕುದರಿ ಸೇರಿದಂತೆ ಧರ್ಮಗಳ ಗುರುಗಳು, ಮಠಾಧೀಶರು, ವರ್ತಕರು,ರೈತರು, ದಲಿತಪರ, ಕನ್ನಡಪರ, ಮಹಿಳಾ ಸಂಘಟನೆಗಳ ಹಾಗೂ ಸಮಿತಿ ಪಧಾದಿಕಾರಿಗಳೂ ಸೇರಿದಂತೆ ನೂರಾರು ತಾಲ್ಲೂಕಿನ ಮಹಾಜನತೆ ಭಾಗವಹಿಸಿದ್ದರು.



# ಕುರುಬ ಸಮಾಜದ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ರಾಣೆಬೆನ್ನೂರ- ರಾಜ್ಯ ಮಟ್ಟದ 539 ನೇ ಭಕ್ತ ಶ್ರೇಷ್ಠ ಶ್ರೀ ಕನಕದಾಸರ ಜಯಂತ್ಯೋತ್ಸವದ ಅಂಗಚಾಗಿ ತಾಲೂಕಾ ಕುರುಬ ಸಮಾಜ ನೌಕರರ ಸಂಘದ ವತಿಯಿಂದ ಅಕ್ಟೋಬರ್ 25 ರಂದು ಶ್ರೀ ಬೀರೇಶ್ವರ ಹೊರಗುಡಿ ಆವರಣದಲ್ಲಿ ನಡೆಯುವ ರಾಣೆಬೆನ್ನೂರ ತಾಲ್ಲೂಕಾ ಮಟ್ಟದ ಕುರಬ ಸಮಾಜದ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಪ್ರಸಕ್ತ ಸಾಲಿನ ಮಾರ್ಚ/ಎಪ್ರೀಲ್/ಮೇ/ಜೂನ್/ಜುಲೈ ತಿಂಗಳ ಪರೀಕ್ಷೆಗಳಲ್ಲಿ ಎಸ್.ಎಸ್.ಎಲ್.ಸಿ/ಪಿ.ಯು.ಸಿ. ಹಾಗೂ ಪದವಿ (ವಾಣಿಜ್ಯ, ಕಲಾ ಹಾಗೂ ವಿಜ್ಞಾನ) ತರಗತಿಗಳಲ್ಲಿ ಹೆಚ್ಚು ಅಂಕಗಳಿಸಿ ಉತ್ತೀರ್ಣರಾದವರಿಗೆ "ವಿದ್ಯಾರ್ಥಿ ಪ್ರತಿಭಾ ಪುರಸ್ಕಾರ" ಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು ಅಕ್ಟೋಬರ 15 ರೊಳಗಾಗಿ ಈ ಕೆಳಕಾಣಿಸಿದ ವಿಳಾಸದಲ್ಲಿ ತಮ್ಮ ಇತ್ತೀಚಿನ ಭಾವಚಿತ್ರ ಹಾಗೂ ಅಂಕಪಟ್ಟಿ ಮತ್ತು ವರ್ಗಾವಣೆ ಪ್ರಮಾಣಪತ್ರಗಳ ಝರಾ-ಕ್ಸ ಪ್ರತಿಯೊಂದಿಗೆ ನಿಗದಿತ ನಮೂನೆಯನ್ನು ಪಡೆದುಕೊಂಡು ಅರ್ಜಿ ಸಲ್ಲಿಸಲು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಅಧ್ಯಕ್ಷರುಸುಭಾಸಚಂದ್ರ ಡಿ. ಕುರುಬರ ಮೋ:9964030702, ಕಾರ್ಯದರ್ಶಿ ಕರಬಸಪ್ಪ ಲೋ. ಚೆನ್ನಿಕಟ್ಟಿ ಮೊ: 9449422854, ಹಾಗೂ ಉಪಾಧ್ಯಕ್ಷ ಎಚ್. ಎನ್. ಮೆಳ್ಳಿ ಮೋ:9886963393ಇವರನ್ನುಸಂಪರ್ಕಿಸಲು ಸಂಘವು ತಿಳಿಸಿದೆ.

ಉಚಿತ ಅರ್ಜಿ ಸಿಗುವ ಮತ್ತು ಸಲ್ಲಿಸುವ ಸ್ಥಳ ಶ್ರೀ ಶ್ರೀಶೈಲ ಪ್ರಿಂರ್ಸ್ ಬಸ್ ಸ್ಟ್ಯಾಂಡ್ ಹತ್ತಿರ ರಾಣೇಬೆನ್ನೂರ ಮೋ.7406509669 , ಕಾರ್ಯದರ್ಶಿಗಳು ಕಂಬಳಿ ಸೊಸೈಟಿ ಪಿ. ಬಿ. ರಸ್ತೆ ರಾಣೇಬೆನ್ನೂರ ಮೋ.9483474335 ಗೆ ಸಂಪರ್ಕಿಸಬೇಕು ಎಂದು ಸಂಘವು ಪ್ರಕಟಣೆಯಲ್ಲಿ ತಿಳಿಸಿದೆ.

# ವೈಜ್ಞಾನಿಕ ಕಾರ್ಯಾಗಾರ ಇಂದು

**ಹಾವೇರಿ:** ನಗರದ ಹೊರವಲಯದಲ್ಲಿರುವ ಜಿಲ್ಲಾಡಳಿತದ ಬಳಿ ಇರುವ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ವಿಶ್ವ ಫಾರ್ಮಸಿಸ್ಟ್ ದಿನಾಚರಣೆಯ ಅಂಗವಾಗಿ ಜಿಲ್ಲಾ ಸರಕಾರಿ ಫಾರ್ಮಸಿ ಅಧಿಕಾರಿಗಳ ಸಂಘದ ವತಿಯಿಂದ ಸೆ.30 ರಂದು ಬೆಳಿಗ್ಗೆ 10ಕ್ಕೆ ವೈಜ್ಞಾನಿಕ ಕಾರ್ಯಾಗಾರ ಜರುಗಲಿದೆ.

ಜಿಲ್ಲಾ ಘಟಕದ ಅಧ್ಯಕ್ಷ ಪಟೇಲ ಮಹಮದ ಅಸಗರ ಅಧ್ಯಕ್ಷತೆಯಲ್ಲಿ ಜರಗುವ ಕಾರ್ಯಾಗಾರವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಾಗರಾಜ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಹಾವೇರಿ ವೈದ್ಯಕೀಯ ವಿಜ್ಞಾನ ಸಂಸ್ಥೆಯ ನಿರ್ದೇಶಕ ಡಾ. ಪ್ರದೀಪಕುಮಾರ ಎಂ.ವಿ, ರಾಜ್ಯ ಸರಕಾರಿ ಫಾರ್ಮಸಿ ಅಧಿಕಾರಿಗಳ ಸಂಘದ ಅಧ್ಯಕ್ಷ ಸಂತೋಷಕುಮಾರ ಕುಸುಮಾ, ಜಿಲ್ಲಾ ಸರಕಾರಿ ನೌಕರರ ಸಂಘದ ಅಧ್ಯಕ್ಷ ಮಲ್ಲೇಶ ಕರಿಗಾರ, ರಾಜ್ಯ ಸರಕಾರಿ ಫಾರ್ಮಸಿ ಅಧಿಕಾರಿಗಳ ಸಂಘದ ಗೌರವಾಧ್ಯಕ್ಷ ಸುರೇಶ ಮೊರಗೇರಿ ಭಾಗವಹಿಸಲಿದ್ದಾರೆ. ವೃತ್ತಿ ಕೌಶಲ್ಯ ಹಾಗೂ ಒತ್ತಡ ನಿರ್ವಹಣೆ ಕುರಿತು ನಿವೃತ್ತ ಫಾರ್ಮಸಿ ಅಧಿಕಾರಿ ಶಿವಯೋಗಿ ಬಣಕಾರ ಉಪನ್ಯಾಸ ನೀಡಲಿದ್ದಾರೆ.

# ಕಲಾ ಕಾಲೇಜಿನ ಪ್ರವಾಸೋದ್ಯಮ ವಿಭಾಗಕ್ಕೆ 'ಅತ್ಯುತ್ತಮ ಕರ್ನಾಟಕ ಪ್ರವಾಸೋದ್ಯಮ ಪ್ರಶಸ್ತಿ

**ಧಾರವಾಡ:** ಬೆಂಗಳೂರಿನ ಪ್ಯಾಲೇಸ್ ಗ್ರೌಂಡ್ಸ್‌ನಲ್ಲಿ ಸೆಪ್ಟೆಂಬರ್ 27 ರಂದು ನಡೆದ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಸಮಾರಂಭದಲ್ಲಿ, 2026ನೇ ಸಾಲಿನ ಧಾರವಾಡದ ರ್‍ನಾಟಕ ವಿಶ್ವವಿದ್ಯಾಲಯದ ರ್‍ನಾಟಕ ಕಲಾ ಕಾಲೇಜಿನ ಪ್ರವಾಸೋದ್ಯಮ ಅಧ್ಯಯನ ವಿಭಾಗ-ಕ್ಕೆ 'ರ್‍ನಾಟಕ ಪ್ರವಾಸೋದ್ಯಮ ಪ್ರಶಸ್ತಿ-2026' ನೀಡಿ ಗೌರವಿಸಲಾಯಿತು.

ರಾಜ್ಯದ 'ಪ್ರವಾಸೋದ್ಯಮ ಕ್ಷೇತ್ರದಲ್ಲಿನ ಅತ್ಯುತ್ತಮ ಶಿಕ್ಷಣ ಸಂಸ್ಥೆ' ವಿಭಾಗದಲ್ಲಿ ಈ ಪ್ರಶಸ್ತಿ ಲಭಿಸಿದೆ.

ರಾಜ್ಯದ ಮುಖ್ಯಮಂತ್ರಿಯಾದ ಡಿ.ಕೆ.ಶಿವಕುಮಾರ್ ಅವರ ಸಮ್ಮುಖದಲ್ಲಿ, ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜರ್ಜ್ ಅವರು ಪ್ರಶಸ್ತಿಯನ್ನು ಪ್ರದಾನ ಮಾಡಿದರು. ಪ್ರವಾಸೋದ್ಯಮ ವಿಭಾಗದ ಮುಖ್ಯಸ್ಥ ಡಾ. ಜಗದೀಶ್ ಕಿವುಡನವರ, ರ್‍ನಾಟಕ ಕಲಾ ಕಾಲೇಜಿನ ಪ್ರಾಂಶುಪಾಲ ಡಾ. ಐ.ಸಿ. ಮುಳಗುಂದ ಅವರು ಪ್ರಶಸ್ತಿಯನ್ನು ಸ್ವೀಕರಿಸಿದರು.

ಕರ್ನಾಟಕ ವಿಶ್ವವಿದ್ಯಾಲಯವು ರ್‍ನಾಟಕ ಕಲಾ ಕಾಲೇಜಿನ ಆವರಣದಲ್ಲಿ 2007ರಲ್ಲಿ ಆರಂಭವಾದ ಪ್ರವಾಸೋದ್ಯಮ ಅಧ್ಯಯನ ವಿಭಾಗವು ಪ್ರವಾಸೋದ್ಯಮ ಮತ್ತು ಆತಿಥ್ಯ ಕ್ಷೇತ್ರಕ್ಕೆ ಅಗತ್ಯವಾದ ಗುಣಮಟ್ಟದ ಶಿಕ್ಷಣ ಹಾಗೂ ಕೌಶಲ್ಯಪರ್ಣ ಮಾನವ ಸಂಪನ್ಮೂಲವನ್ನು ರೂಪಿಸುವಲ್ಲಿ ಮಹತ್ವದ ಕೊಡುಗೆ ನೀಡುತ್ತಿದೆ. ಕೈಗಾರಿಕಾ ಭೇಟಿಗಳು, ಇಂರ್‍ನ್‌ಶಿಪ್‌ಗಳು, ಕ್ಷೇತ್ರ ಅಧ್ಯಯನಗಳು, ಕರ್‍ಯಾಗಾರಗಳು, ವಿಚಾರ ಸಂಕಿರಣಗಳು ಹಾಗೂ ಉದ್ಯಮ ಸಹಯೋಗಗಳ ಮೂಲಕ ವಿದ್ಯರ್ಥಿಗಳಿಗೆ ಪ್ರಾಯೋಗಿಕ ಅನುಭವ ಒದಗಿಸಲಾಗುತ್ತಿದೆ.

ಸುಸ್ಥಿರ ಪ್ರವಾಸೋದ್ಯಮ, ಪರಂಪರೆ ಸಂರಕ್ಷಣೆ, ಡಿಜಿಟಲ್ ಪ್ರವಾಸೋದ್ಯಮ, ಧರ್ಮಿಕ ಪ್ರವಾಸೋದ್ಯಮ ಮತ್ತು ಪ್ರವಾಸೋದ್ಯಮ ಶಿಕ್ಷಣದಲ್ಲಿನ ನಾವೀನ್ಯತೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ವಿಭಾಗವು ಗಮನರ್ಹ ಚಟುವಟಿಕೆಗಳನ್ನು ನಡೆಸುತ್ತಿದೆ. ಈ ಪ್ರಶಸ್ತಿಯು ವಿಭಾಗದ ಬೋಧಕ ಸಿಬ್ಬಂದಿ, ವಿದ್ಯರ್ಥಿಗಳು, ಹಳೆಯ ವಿದ್ಯರ್ಥಿಗಳು, ಉದ್ಯಮ ಪಾಲುದಾರರು ಹಾಗೂ ವಿಶ್ವವಿದ್ಯಾಲಯದ ಆಡಳಿತ ಮಂಡಳಿಯ ಸಾಮೂಹಿಕ ಪ್ರಯತ್ನಕ್ಕೆ ಸಂದ ಗೌರವವಾಗಿದೆ ಎಂದು ವಿಭಾಗ ತಿಳಿಸಿದೆ. ಡಾ. ರಾಣಿ ರವಿಶಂಕರ್ ಹಾಗೂ ಶ್ರೀ ಕೇದಾರನಾಥ ಅಂಗಡಿ ಸಮಾರಂಭದಲ್ಲಿ ಉಪಸ್ಥಿತರಿದ್ದರು.



# ಅಗಲೀಕರಣಕ್ಕೂ ಮುನ್ನ ಧೂಳು ಈಗಲೂ ಅದರದೇ ಗೋಳು

## ಕಟ್ಟಡ ತೆರವುಗೊಂಡು ಮೂರು ತಿಂಗಳು_ಮುಖ್ಯರಸ್ತೆ ಅಗಲೀಕರಣ ಕಾಮಗಾರಿ ಆರಂಭಕ್ಕೆ ವಿಳಂಬವೇಕೆ? । ಒಡೆದು ಹಾಳಾದ ರಸ್ತೆಯಲ್ಲಿ ವಾಹನ ಸವಾರರ ಪರದಾಟ

ಗಣೇಶ ಎಸ್.ಎ. ಬ್ಯಾಡಗಿ

ಪಟ್ಟಣದ ಬಹುದಿನಗಳ ಬೇಡಿಕೆಯಾಗಿದ್ದ ಮುಖ್ಯ ರಸ್ತೆ ಅಗಲೀಕರಣ ಕಾಮಗಾರಿಗೆ ಕಟ್ಟಡ ತೆರವು ಕಾರ್ಯಾಚರಣೆ ನಡೆದು 3 ತಿಂಗಳು ಕಳೆಯುತ್ತಾ ಬಂದರೂ, ಮೂಲ ಕಾಮಗಾರಿಗೆ ಇನ್ನೂ ಚಾಲನೆ ದೊರೆಯದಿರುವುದು ಸಾರ್ವಜನಿಕರು ಹಾಗೂ ವರ್ತಕರ ಅಸಮಾಧಾನಕ್ಕೆ ಕಾರಣವಾಗಿದೆ.

ಸುಮಾರು 15 ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಮುಖ್ಯ ರಸ್ತೆ ಅಗಲೀಕರಣದ ಬೇಡಿಕೆಗೆ ಇತ್ತೀಚೆಗೆ ವೇಗ ಸಿಗಲಿದೆ ಎಂಬ ನಿರೀಕ್ಷೆ ಮೂಡಿತ್ತು. ಕಳೆದ ಜೂನ್‌ನಲ್ಲಿ ರಸ್ತೆ ಅಗಲೀಕರಣಕ್ಕೆ ಅಡ್ಡಿಯಾಗಿದ್ದ ಕಟ್ಟಡಗಳ ತೆರವು ಕಾರ್ಯಾಚರಣೆ ನಡೆಸಲಾಗಿತ್ತು. ಆದರೆ ಕಟ್ಟಡಗಳನ್ನು ತೆರವುಗೊಳಿಸಿ ತಿಂಗಳುಗಳು ಕಳೆದರೂ, ರಸ್ತೆ ಅಭಿವೃದ್ಧಿಯ ಮುಂದಿನ ಹಂತದ ಕಾಮಗಾರಿ ಆರಂಭವಾಗದಿರುವುದು ಸಾರ್ವಜನಿಕರ ತಾಳ್ಮೇ ಪರೀಕ್ಷಿಸುತ್ತಿದೆ ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ.

**ಒಡೆದು ಹಾಳಾದ ರಸ್ತೆಯಲ್ಲಿ ಸಂಚಾರ ದುಸ್ತರ:** ಮುಖ್ಯರಸ್ತೆಯಲ್ಲಿ ಕಳೆದ ಜೂನ್ 08 ರಿಂದ ಕಟ್ಟಡ ತೆರವುಗೊಂಡಿರುವ ಪ್ರದೇಶ ದಲ್ಲಿ ರಸ್ತೆ ಸಂಪೂರ್ಣವಾಗಿ ಸಮತಟ್ಟಾಗದೇ ಇರುವುದರಿಂದ ವಾಹನ ಸವಾರರು ಪ್ರತಿನಿತ್ಯ ತೊಂದರೆ ಅನುಭವಿಸುವಂತಾಗಿದೆ. ಗುಂಡಿಗಳು, ಕಲ್ಲು–ಮಣ್ಣು ಹಾಗೂ ಅಸಮ ತಟ್ಟಾದ ರಸ್ತೆಯಲ್ಲಿ ವಾಹನ ಸಂಚಾರ ನಡೆಸುವುದು ಸವಾಲಾಗಿ ಪರಿಣಮಿಸಿದೆ. ವಿಶೇಷವಾಗಿ ದ್ವಿಚಕ್ರ ವಾಹನ ಸವಾರರು ಹಾಗೂ ಪಾದಚಾರಿಗಳು ಧೂಳಿನಿಂದ ಸಂಕಷ್ಟ ಅನುಭವಿಸುತ್ತಿದ್ದಾರೆ. ವಾಹನಗಳು ಸಂಚರಿಸುವಾಗ ಮೇಲೇಳುವ ಧೂಳು ರಸ್ತೆ ಬದಿಯ ಅಂಗಡಿಗಳಿಗೆ ನುಗ್ಗುತ್ತಿದ್ದು, ವ್ಯಾಪಾರಸ್ಥರು ದಿನವಿಡೀ ಧೂಳಿನ ವಾತಾವ ರಣದಲ್ಲೇ ವ್ಯಾಪಾರ ನಡೆಸಬೇಕಾದ ಪರಿಸ್ಥಿತಿ ನಿರ್ಮಾ ಣವಾಗಿದೆ.

**ಅವಾಗ್ಲೂ ಧೂಳು ಈವಾಗ್ಲೂ ಧೂಳು!:** ಮುಖ್ಯರಸ್ತೆ ಅಗಲೀಕರಣವಾದರೆ ಸಂಚಾರ ದಟ್ಟಣೆ ಕಡಿಮೆಯಾಗಲಿದೆ, ರಸ್ತೆ ಸುಧಾರಣೆ ಯಾಗಲಿದೆ, ಧೂಳಿನ ಸಮಸ್ಯೆ ನಿವಾರಣೆಯಾಗಲಿದೆ ಎಂಬ ನಿರೀಕ್ಷೆ ಸ್ಥಳೀಯರಲ್ಲಿತ್ತು. ಆದರೆ ಕಟ್ಟಡ ತೆರವು ನಂತರವೂ ಪರಿಸ್ಥಿತಿ ಯಲ್ಲಿ ನಿರೀಕ್ಷಿತ ಬದಲಾವಣೆ ಕಾಣಿಸದಿರುವುದು ವರ್ತಕರ ಆಕ್ರೋಶಕ್ಕೆ ಕಾರಣವಾಗಿದೆ."ಅಗಲೀಕರಣ ಕಾಮಗಾರಿಗೂ ಮುನ್ನ ಹಾಳಾಗಿದ್ದ ರಸ್ತೆಯಲ್ಲಿ ಧೂಳು, ಕಟ್ಟಡ ತೆರವು ಬಳಿಕವೂ ಸಹ ಧೂಳು, ಇದು ಜನರ ಬದುಕನ್ನ ಹೈರಾಣಾಗಿಸಿದೆ.



ಎಪಿಎಂಸಿ ವತಿಯಿಂದ ಕಾಮಗಾರಿ ವಿಳಂಬ ಏಕೆ?ಮುಖ್ಯರಸ್ತೆ ಅಭಿವೃದ್ಧಿಯ ಮುಂದಿನ ಹಂತದ ಕಾಮಗಾರಿ ಎಪಿಎಂಸಿ ವತಿಯಿಂ ದ ಕೈಗೊಳ್ಳಬೇಕಿದೆ, ಮೂರು ತಿಂಗಳು ಕಳೆಯುತ್ತಾ ಬಂದಿದ್ದರೂ ಸಹ ಇಲ್ಲಿವರೆಗೂ ಕಾಮಗಾರಿ ಆರಂಭ ಮಾಡದೇ ಇರಲು ಕಾರಣವೇನು? ಟೆಂಡರ್ ಮುಗಿದರೂ ಗುತ್ತಿಗೆದಾರ ಯಾಕೆ.? ಕೆಲಸ ಆರಂಭಿಸಿಲ್ಲ ವಿಳಂಬವಾಗುತ್ತಿರುವುದಕ್ಕೆ ನಿಖರ ಕಾರಣ ವೇನು? ಎಂಬುದು ಸಾರ್ವಜನಿಕರ ಪ್ರಶ್ನೆಯಾಗಿದೆ.

ಇಲಾಖೆಗಳ ಸಮನ್ವಯತೆ ಕೊರತೆಯೇ?ಪುರಸಭೆ ವತಿಯಿಂದ ಈಗಾಗಲೇ ಮುಖ್ಯ ರಸ್ತೆಯಲ್ಲಿ ಯುಜಿಡಿ ಹಾಗೂ 24*7 ಕಾಮ ಗಾರಿ ನಡೆಸಲಾಗುತ್ತಿದೆ, ಕಟ್ಟಡ ತೆರವು ಕಾರ್ಯಾಚರಣೆ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಇಲಾಖೆಗಳು ಪರಸ್ಪರ ಸಮನ್ವಯ ಸಾಧಿಸಿ ರಸ್ತೆ ಕಾಮಗಾರಿಗೆ ವೇಗ ನೀಡಬೇಕು ಎಂಬ ಒತ್ತಾಯ ಕೇಳಿಬರುತ್ತಿದೆ. ಇಲಾಖೆಗಳ ನಡುವೆ ಸಮನ್ವಯತೆ ಕೊರತೆ ವಿಳಂಬಕ್ಕೆ ಪ್ರಮುಖ ಕಾರಣ ಎಂಬ ಆರೋಪ ಸಾರ್ವಜನಿಕರಿಂದ ಕೇಳಿ ಬರುತ್ತಿದೆ, ಇದಕ್ಕೆ ಇಲಾಖೆಗಳು ಆಸ್ಪದ ನೀಡದೆ ಸೀಜನ್ ಆರಂಭಕ್ಕೂ ಮುನ್ನ ಕಾಮಗಾರಿ ಆರಂಭಿಸಬೇಕಿದೆ.

ಅಗಲೀಕರಣಕ್ಕಾಗಿ 15 ವರ್ಷ ನಡೆಸಿದ ಹೋರಾಟ ಅಷ್ಟಿಷ್ಟಲ್ಲ ಎಂಬುದು ಅಧಿಕಾರಿಗಳು ಮೊದಲು ಅರಿಯಲಿ, ಮುಖ್ಯರಸ್ತೆಯ ಅಭಿವೃದ್ಧಿ ಕೇವಲ ವಾಹನ ಸಂಚಾರಕ್ಕಷ್ಟೇ ಸೀಮಿತವಲ್ಲ. ಇದು ಪಟ್ಟಣದ ವ್ಯಾಪಾರ,ಸಾರ್ವಜನಿಕರ ಸಂಚಾರ ಹಾಗೂ ನಗರದ ಒಟ್ಟಾರೆ ಅಭಿವೃದ್ಧಿಗೆ ಸಂಬಂಧಿಸಿದ ಪ್ರಮುಖ ಯೋಜನೆಯಾಗಿದೆ. ಹೀಗಾಗಿ ಉಳಿದ ಕಾಮಗಾರಿಗಳನ್ನು ತ್ವರಿತವಾಗಿ ಕೈಗೊಂಡು ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿ.

। ಸುರೇಶ ಛಲವಾದಿ ಅಗಲೀಕರಣ ಹೋರಾಟ ಸಮಿತಿ ಅಧ್ಯಕ್ಷ

ಈ ವರ್ಷ ಮಳೆಗಾಲ ಇಲ್ಲದೇ ಇರುವ ಕಾರಣ. ಮನೆಯಲ್ಲಿ ನೀರು ನುಗ್ಗದೇ ಮುಖ್ಯರಸ್ತೆಯಲ್ಲಿ ವರ್ತಕರು ನಿಟ್ಟುಸಿರು ಬಿಟ್ಟಿದ್ದೇ ವೆ ಸಮರ್ಪಕ ಮಳೆಯಾಗಿದ್ದಲ್ಲಿ ನಮ್ಮ ಬದುಕು ಹಾಳಾದ ರಸ್ತೆಯಲ್ಲಿ ಮತ್ತಷ್ಟು ದುಸ್ತರವಾಗುತ್ತಿತ್ತು, ಆಸ್ತಿ ಕಳೆದುಕೊಂಡು ಎಲ್ಲದ ಕ್ಕೂ ಸಹಕಾರ ಕೊಟ್ಟಿದ್ದೇವೆ ಕೂಡಲೇ ಕಾಮಗಾರಿ ಆರಂಭಿಸಿ ರಸ್ತೆ ನಿರ್ಮಿಸಿ.

। ಸಿದ್ದಲಿಂಗಪ್ಪ ಶೆಟ್ಟರ ಮುಖ್ಯರಸ್ತೆ ವರ್ತಕ

ಉತ್ತಮ ರಸ್ತೆ ನಿರ್ಮಾಣ ನಮ್ಮ ಗುರಿ, ಕಾಮಗಾರಿ ವಿಳಂಬವಾಗಬಾರದು ಜನರಿಗೆ ತೊಂದರೆ ಆಗಬಾರದು ಎಂಬ ಉದ್ದೇಶ ದಿಂದ ಎಲ್ಲ ಕೆಲಸವನ್ನ ವೇಗವಾಗಿ ಮಾಡಲಾಗಿದೆ, ಇನ್ನೇನು ಕೆಲವೇ ದಿನಗಳಲ್ಲಿ ಕಾಮಗಾರಿಗೆ ಭೂಮಿಪೂಜೆ ನಡೆಯಲಿದೆ.

। ಆದರ್ಶ ಡಿ.ಬಿ.ಎಪಿಎಂಸಿ ಕಾರ್ಯದರ್ಶಿ

# ಎಸ್ಐಆರ್ ಹೆಸರಲ್ಲಿ ಜನರ ದಾರಿ ತಪ್ಪಿಸುತ್ತಿದೆ ಕಾಂಗ್ರೆಸ್

ಸಮಾಲೋಚನೆ ಸುದ್ದಿ ಹಾವೇರಿ

ಎಸ್ಐಆರ್ ಪ್ರಕ್ರಿಯೆ ಕುರಿತು ಆರೋಪ ಮಾಡುವ ಮೂಲಕ ಕಾಂಗ್ರೆಸ್ ಜನರ ಗಮನ ಬೇರೆಡೆ ಸೆಳೆಯುವ ಪ್ರಯತ್ನ ಮಾಡುತ್ತಿದೆ. ರಾಜ್ಯದಲ್ಲಿ ಕಾಂಗ್ರೆಸ್‌ನ ಆಡಳಿತ ಸಂಪೂರ್ಣ ಕುಸಿದಿದ್ದು, ಭೀಕರ ಬರಗಾಲದ ನಡುವೆಯೂ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಬದಲು ರಾಜಕೀಯ ಮಾಡುತ್ತಿದೆ ಎಂದು ಮಾಜಿ ಸಚಿವ ಬಿ.ಸಿ. ಪಾಟೀಲ ಆರೋಪಿಸಿದರು.

***ರಾಜ್ಯದಲ್ಲಿ ಕಾಂಗ್ರೆಸ್ ಆಡಳಿತ ಸಂಪೂರ್ಣ ಕುಸಿತ**
***ಮಾಜಿ ಸಚಿವ ಬಿ.ಸಿ. ಪಾಟೀಲ ಆರೋಪ**

ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್ಐಆರ್ ಇತ್ತೀಚೆಗೆ ಆರಂಭವಾಗಿರುವ ಪ್ರಕ್ರಿಯೆಯಲ್ಲ. ಕಾಲಕಾಲಕ್ಕೆ ಮತದಾರರ ಪಟ್ಟಿಯ ಪರಿಷ್ಕರಣೆ ನಡೆಯುತ್ತಲೇ ಬಂದಿದೆ. ಕೇರಳದಲ್ಲಿಯೂ ಎಸ್ಐಆರ್ ಪ್ರಕ್ರಿಯೆ ನಡೆದ ಬಳಿಕವೇ ಚುನಾವಣೆ ನಡೆದಿದೆ. ಅಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದ್ದರೂ ಆಗ ಎಸ್ಐಆರ್ ಕುರಿತು ಪ್ರಶ್ನಿಸಿರಲಿಲ್ಲ ಎಂದು ಟೀಕಿಸಿದರು.

ರಾಜ್ಯದಲ್ಲಿ ಭೀಕರ ಬರಗಾಲವಿದ್ದರೂ ರೈತರಿಗೆ ಕೇವಲ ತಲಾ 2,500 ರೂ. ಪರಿಹಾರ ನೀಡಲು ಸರ್ಕಾರ ಮುಂದಾಗಿದೆ. ರೈತ ಒಂದು ರಂಟಿ ಹೊಡೆಸಲು 2500 ರೂ. ಖರ್ಚು ಮಾಡುತ್ತಾನೆ. ಸರ್ಕಾರದ ಪರಿಹಾರದ ಹಣದ ಮೊತ್ತ ಕೇಳಿದರೆ, ರೈತರನ್ನು ಭಿಕ್ಷುಕರನ್ನಾಗಿ ಕಂಡಂತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಳೆದ ಆರು ತಿಂಗಳಿಂದ ವೃದ್ಧಾಪ್ಯ ವೇತನ ಬಿಡುಗಡೆಯಾಗಿಲ್ಲ ಎಂದು ಆರೋಪಿಸಿದ ಅವರು, ಜನರ ಮೂಲಭೂತ ಸಮಸ್ಯೆಗಳತ್ತ ಗಮನಹರಿಸುವ ಬದಲು ಎಸ್ಐಆರ್ ವಿಚಾರ ಮುಂದಿಟ್ಟುಕೊಂಡು ರಾಜಕೀಯ ಮಾಡಲಾಗುತ್ತಿದೆ ಎಂದರು.

**ಬರ ಘೋಷಣೆ ಸರ್ಕಾರದ ನಿರ್ಧಾರ:** ಹಿರೇಕೆರೂರು ತಾಲೂಕನ್ನು ಬರಪೀಡಿತ ತಾಲೂಕುಗಳ ಪಟ್ಟಿಗೆ ಸೇರಿಸಿರುವುದು ಸರ್ಕಾರದ ನಿರ್ಧಾರ. ಇದರಲ್ಲಿ ಸ್ಥಳೀಯ ಶಾಸಕರ ಪಾತ್ರವಿಲ್ಲ. ಆದ–ರೆ, ಹಿರೇಕೆರೂರಿನಲ್ಲಿ ಶಾಸಕರು ಬರ ಘೋಷಣೆಯ ಶ್ರೇಯ ಪಡೆಯಲು ಮುಂದಾಗಿದ್ದಾರೆ ಟೀಕಿಸಿದರು.

ಎಚ್.ಕೆ. ಪಾಟೀಲರ ಮಾದರಿಯಲ್ಲಿ ಬರ ಘೋಷಣೆ ಮಾಡದಿದ್ದರೆ ರಾಜೀನಾಮೆ ನೀಡುವುದಾಗಿ ಹಿರೇಕೆರೂರು ಶಾಸಕರು ಹೇಳಿದ್ದರೆ, ಆಗ ಬರ ಘೋಷಣೆಯ ಶ್ರೇಯ ಅವರಿಗೆ ನೀಡಬಹುದಿತ್ತು. ವಿಧಾನಸೌಧದಲ್ಲಿ ಏನು ಮಾತನಾಡಬೇಕು ಎಂಬ ಪರಿಜ್ಞಾನವೂ ಶಾಸಕರಿಗೆ ಇಲ್ಲ ಎಂದು ಕುಟುಕಿದರು.

ಜಿಲ್ಲೆಯ ಬ್ರಿಡ್ಜ್ ಕಂ ಬ್ಯಾರೇಜ್‌ಗಳ ನಿರ್ವಹಣೆ ಸಮರ್ಪಕವಾಗಿ ನಡೆಯುತ್ತಿಲ್ಲ. ಬಿಜೆಪಿ ಸರ್ಕಾರದ ಅವಧಿಯಲ್ಲಿ ರೂಪಿಸಿದ್ದ ಏತ ನೀರಾವರಿ ಯೋಜನೆಗಳ ಮೂಲಕ ಕೆರೆಗಳನ್ನು ತುಂಬಿಸುವ ಕಾರ್ಯವೂ ಸಮರ್ಪಕವಾಗಿ ನಡೆಯುತ್ತಿಲ್ಲ ಎಂದು ಆರೋಪಿಸಿದರು.

**ಎಸ್ಐಆರ್ ವಿರುದ್ಧ ಅನಗತ್ಯ ಆರೋಪ:** ಬಿಜೆಪಿ ಜಿಲ್ಲಾಧ್ಯಕ್ಷ ವಿರೂಪಾಕ್ಷಪ್ಪ ಬಳ್ಳಾರಿ ಮಾತನಾಡಿ, ಚುನಾವಣಾ ಆಯೋಗ ನಡೆಸುತ್ತಿರುವ ಎಸ್ಐಆರ್ ಪ್ರಕ್ರಿಯೆ ಕುರಿತು ಕಾಂಗ್ರೆಸ್ ಹಾಗೂ ಅದರ ಮಿತ್ರಪಕ್ಷಗಳು ವಿನಾಕಾರಣ ಆರೋಪ ಮಾಡುತ್ತಿವೆ. ವಿರೋಧ ಪಕ್ಷಗಳು ಚುನಾವಣೆಯಲ್ಲಿ ಗೆಲುವು ಸಾಧಿಸಿದಾಗ ಚುನಾವಣಾ ಪ್ರಕ್ರಿಯೆ ಸರಿಯಾಗಿದೆ ಎಂದು ಹೇಳುತ್ತವೆ. ಆದರೆ, ಜನಾದೇಶ ತಮ್ಮ ವಿರುದ್ಧ ಬಂದಾಗ ಮಾತ್ರ ಅಕ್ರಮದ ಆರೋಪ ಮಾಡುತ್ತವೆ. ತಕ್ಷಣದ ರಾಜಕೀಯ ಲಾಭಕ್ಕಾಗಿ ಚುನಾವಣಾ ಆಯೋಗ ಹಾಗೂ ಅದರ ಸಂಸ್ಥೆಗಳ ಮೇಲೆ ದಾಳಿ ನಡೆಸುವುದು ಅಕ್ಷಮ್ಯ ಎಂದರು.

ಹಾವೇರಿ ಜಿಲ್ಲೆಯಲ್ಲಿಯೂ ಎಸ್ಐಆರ್ ಪ್ರಕ್ರಿಯೆಯಲ್ಲಿ ಅನರ್ಹ ಮತದಾರರ ಹೆಸರುಗಳನ್ನು ತೆಗೆದುಹಾಕಲಾಗಿದೆ. ಮೃತಪಟ್ಟವರು ಹಾಗೂ ಎರಡು–ಮೂರು ಕಡೆ ಮತದಾರರ ಪಟ್ಟಿಯಲ್ಲಿ ಹೆಸರು ಹೊಂದಿದ್ದವರ ಹೆಸರುಗಳನ್ನು ಡಿಲೀಟ್ ಮಾಡಲಾಗಿದೆ. ಕಾಂಗ್ರೆಸ್ ಮಾಡುತ್ತಿರುವ ಆರೋಪಗಳನ್ನು ಸಾಬೀತುಪಡಿಸಲಿ ಎಂದು ಸವಾಲು ಹಾಕಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿ ಇರುವುದರಿಂದ ಕಾಂಗ್ರೆಸ್ ನಾಯಕರು ಎಸ್ಐಆರ್ ಕುರಿತು ರಾಜಕೀಯ ಮಾಡುವ ಬದಲು ಬರದಿಂದ ಸಂಕಷ್ಟಕ್ಕೊಳಗಾದ ಜನರ ಸಮಸ್ಯೆಗಳತ್ತ ಗಮನಹರಿಸಬೇಕು ಎಂದು ಆಗ್ರಹಿಸಿದರು.

ಮಾಜಿ ಶಾಸಕರಾದ ಅರುಣಕುಮಾರ ಪೂಜಾರ, ಶಿವರಾಜ ಸಜ್ಜನರ ಹಾಗೂ ಪಕ್ಷದ ಮುಖಂಡರಾದ ಸಿದ್ದರಾಜ ಕಲಕೋಟಿ, ವಿಜಯಕುಮಾರ ಚಿನ್ನಿಕಟ್ಟಿ, ನಿರಂಜನ ಹೇರೂರು ಮತ್ತಿತರರು ಸುದ್ದಿಗೋಷ್ಠಿಯಲ್ಲಿದ್ದರು.




## ಗಣೇಶ ಮೂರ್ತಿ ಮರುಸ್ಥಾಪನೆ ಸರಿಯಲ್ಲ...

ಚಿಕ್ಕೇರೂರಿನಲ್ಲಿ ಡಿಜೆ ವ್ಯವಸ್ಥೆಗೆ ಅವಕಾಶ ನೀಡಿಲ್ಲ ಎಂಬ ಕಾರಣಕ್ಕೆ ಗಣೇಶ ಮೂರ್ತಿಯನ್ನು ವಾಪಸ್ ತಂದು ಮರುಸ್ಥಾಪಿಸಿರುವುದು ಸರಿಯಲ್ಲ. ಧಾರ್ಮಿಕ ಆಚರಣೆಗಳನ್ನು ಶಾಂತಿಯುತವಾಗಿ ನಡೆಸಿಕೊಂಡು ಹೋಗಬೇಕು. ಪೊಲೀಸರು ಇದಕ್ಕೆ ಅವಕಾಶ ಮಾಡಿಕೊಡಬೇಕಿತ್ತು. ಆದರೆ, ರಾಜ್ಯದಲ್ಲಿ ಕಾಂಗ್ರೆಸ್ ಇರುವುದರಿಂದ ಪೊಲೀಸರು ಅದರ ಬಗ್ಗೆ ತಲೆ ಕೆಡಿಸಿಕೊಳ್ಳುವುದಿಲ್ಲ ಎಂದು ಮಾಜಿ ಸಚಿವ ಬಿ.ಸಿ. ಪಾಟೀಲ ತಿಳಿಸಿದರು.

# ಪಿಎಂ ಕಿಸಾನ್ ಯೋಜನೆ ಆರ್ಥಿಕ ನೆರವು: ಇ–ಕೆವೈಸಿ ಕಡ್ಡಾಯ

**ಹಾವೇರಿ:** ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿಯೋಜನೆಯಾದ ಪಿ ಎಂ ಕಿಸಾನ್ ಯೋಜನೆಯಡಿ ಆರ್ಥಿಕ ನೆರವು ಪಡೆಯಲು ರೈತರು ಪ್ರತಿ ವರ್ಷವೂ ಬಯೋಮೆಟ್ರಿಕ್ ಇ–ಕೆವೈಸಿ ಮಾಡಿಸುವುದು ಕಡ್ಡಾಯವಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕ ಡಾ.ಮಲ್ಲಿಕಾರ್ಜುನ ಕೆ. ಅವರು ತಿಳಿಸಿದ್ದಾರೆ.

ಇ–ಕೆವೈಸಿ ಪೂರ್ಣಗೊಳಿಸಲು ಬಯೋಮೇಟ್ರಿಕ್ ಆಧಾರಿತ ಇ–ಕೆವೈಸಿ ಹಾಗೂ ಮುಖ ಗುರುತಿಸುವಿಕೆ ಆಧಾರಿತ ಇ–ಕೆವೈಸಿ ಎಂಬ ಎರಡು ವಿಧಾನಗಳಿವೆ. ಬಯೋಮೆಟ್ರಿಕ್ ಇ–ಕೆವೈಸಿ ಮಾಡಿಸಿಕೊಳ್ಳಲು ರೈತರು ಹತ್ತಿರದ ನಾಗರಿಕ ಸೇವಾ ಕೇಂದ್ರ (ಸಿಎಸ್‌ಸಿ), ಗ್ರಾಮ್‌ಒನ್, ಕರ್ನಾಟಕಒನ್ ಸೇವಾ ಕೇಂದ್ರ ಹಾಗೂ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರ ಬಿ.ಎನ್.ಓ. ಲಾಗಿನನಲ್ಲಿ ಆಧಾರ ಕಾರ್ಡ ನೀಡಿ ಇ–ಕೆವೈಸಿ ಮಾಡಿಸಿಕೊಳ್ಳಬಹುದಾಗಿದೆ. ಮುಖ ಗುರುತಿಸುವಿಕೆ ಇ–ಕೆವೈಸಿಯನ್ನು ಗ್ರಾಮ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಪಿ.ಎನ್.ಓ.ಗಳು ಅಥವಾ ಗೂಗಲ್ ಪ್ಲೇಸ್ಟೋರ್‌ನಲ್ಲಿ ಲಭ್ಯವಿರುವ ಕಒ–ಏಖಖಂಓ ಉಠಖಆ್ಯಪ್ ಮೂಲಕ ಸ್ವತಃ ಇ–ಕೆವೈಸಿಯನ್ನು ಮಾಡಿಕೊಳ್ಳಲು ಕೋರಲಾಗಿದೆ.

# ಹಾವೇರಿ ಜಿಲ್ಲಾ ಛಾಯಾಗ್ರಾಹಕರ ಮತ್ತು ವೀಡಿಯೋಗ್ರಾಫರ್ ಸಂಘದ ಜಿಲ್ಲಾ ಅಧ್ಯಕ್ಷರಾಗಿ ರಾಜೇಂದ್ರ ಕುಮಾರ ರಿತ್ತಿ ಆಯ್ಕೆ

ಸಮಾಲೋಚನೆ ಸುದ್ದಿ ಹಾವೇರಿ

ಹಾವೇರಿ: ಹಾವೇರಿ ಜಿಲ್ಲಾ ಛಾಯಾಗ್ರಾಹಕರ ಮತ್ತು ವೀಡಿಯೋಗ್ರಾಫರ್ ಸಂಘದ ಜಿಲ್ಲಾ ಅಧ್ಯಕ್ಷರಾಗಿ ರಾಜೇಂದ್ರ ಕುಮಾರ ರಿತ್ತಿ ಅವರು ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ. ನಗರದ ಮುರುಘಾರಾಜೇಂದ್ರ ಮಠದಲ್ಲಿ ಜರುಗಿದ ಸಂಘದ ಸರ್ವ ಸದಸ್ಯರ ಸಾಮಾನ್ಯ ಸಭೆಯಲ್ಲಿ ನೂತನ ಜಿಲ್ಲಾ ಆಡಳಿತ ಮಂಡಳಿಯನ್ನು ಅಧಿಕೃತವಾಗಿ ಆಯ್ಕೆ ಮಾಡಲಾಯಿತು.

ಗೌರವಾಧ್ಯಕ್ಷರು: ರಂಗನಾಥ ಗಾಯಕವಾಡ್, ಜಿಲ್ಲಾಧ್ಯಕ್ಷರು: ರಾಜೇಂದ್ರ ಕುಮಾರ ರಿತ್ತಿ, ಉಪಾಧ್ಯಕ್ಷರು: ದೇವರಾಜ ಹೆಚ್. ಎಂ., ಪ್ರಧಾನ ಕಾರ್ಯದರ್ಶಿ: ಮಲ್ಲಿಕಾರ್ಜುನ ಕುಂಬಾರಿ, ಅಧ್ಯಕ್ಷರಾಗಿ ಆಯ್ಕೆಯಾದ ನಂತರ ಮಾತನಾಡಿದ ರಾಜೇಂದ್ರ ಕುಮಾರ ರಿತ್ತಿ, "ನನ್ನ ಮೇಲೆ ಭರವಸೆಯಿಟ್ಟು ಮತ್ತೊಮ್ಮೆ ಜಿಲ್ಲಾ ಸಂಘದ ಜವಾಬ್ದಾರಿಯನ್ನು ನೀಡಿದ್ದೀರಿ. ಮುಂಬರುವ ದಿನಗಳಲ್ಲಿ ಸಂಘದ ಕಾರ್ಯವೈಖರಿ ಹಾಗೂ ಜವಾಬ್ದಾರಿಗಳು ಹೆಚ್ಚಾಗಿದ್ದು, ಜಿಲ್ಲೆಯ ಎಲ್ಲಾ ಛಾಯಾಗ್ರಾಹಕ ಮಿತ್ರರು ಸಕ್ರಿಯವಾಗಿ ಸ್ಪಂದಿಸಬೇಕಿದೆ. ನಮ್ಮ ಛಾಯಾಗ್ರಾಹಕ ಬಂಧುಗಳೆಲ್ಲರೂ ಒಂದೇ ಕುಟುಂಬದಂತಿದ್ದು, ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸಿ ಜಿಲ್ಲಾ ಸಂಘವನ್ನು ಇನ್ನಷ್ಟು ಬಲಪಡಿಸೋಣ" ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಶಂಭುಗೌಡ ಅಂದಾನಿಗೌಡ್ರ, ಶಿವಾನಂದ ಕಾಶೆಂಬಿ, ಉಮೇಶ ಹರಿಸತ್ತೇನವರ , ಬಸವರಾಜ ಚಾವಡಿ, ಪ್ರಕಾಶ ಹೊಟ್ಟೂರು ಮಾಲತೇಶ ಇಚ್ಚಂಗಿ, ನಾಗರಾಜ ಕುರಬರ ತಿಪ್ಪೆಸ್ವಾಮಿ ಆರಾಧ್ಯಮಠ ಪ್ರಕಾಶ ನಂದಿ ಮುತ್ತಣ್ಣ ಹಿರೇಮಠ ದೇವರಾಜ ರಿತ್ತಿ ಹಾಗೂ ಜಿಲ್ಲೆಯ ಹಲವಾರು ಛಾಯಾಗ್ರಾಹಕರು ಮತ್ತು ವೀಡಿಯೋಗ್ರಾಫರ್‌ಗಳು ಉಪಸ್ಥಿತರಿದ್ದರು.



# ಮಾಹಿತಿ ನೀಡಿದ ಅಧಿಕಾರಿಗಳಿಗೆ ದಂಡ: –ಆಯುಕ್ತ ಪ್ರಕಾಶ ನಾರಾಯಣ ಚನ್ನಾಳ

**ಹಾವೇರಿ:** ಮಾಹಿತಿ ಹಕ್ಕು ಕಾಯ್ದೆಯಡಿ ರೈತ ಸಮುದಾಯ ಹಾಗೂ ಗಡಿ ಕಾಯುವ ಯೋಧರ ಕುಟುಂಬಸ್ಥರು ಸಲ್ಲಿಸಿದ ಅರ್ಜಿಗಳಿಗೆ ನಿಗದಿತ ಸಮಯದಲ್ಲಿ ಮಾಹಿತಿ ನೀಡದೆ ನಿರ್ಲಕ್ಷ್ಯ ವಹಿಸಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಿ, ದಂಡ ವಿಧಿಸಲಾಗಿದೆ ಎಂದು ಕರ್ನಾಟಕ ಮಾಹಿತಿ ಆಯೋಗದ ಬೆಳಗಾವಿ ಪೀಠದ ರಾಜ್ಯ ಮಾಹಿತಿ ಆಯುಕ್ತ ಪ್ರಕಾಶ ನಾರಾಯಣ ಚನ್ನಾಳ ತಿಳಿಸಿದ್ದಾರೆ.

ಮಾಹಿತಿ ಹಕ್ಕು ಕಾಯ್ದೆಯು ಭಾರತದ ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ಆಡಳಿತದ ಪಾರದರ್ಶಕತೆ ಮತ್ತು ಉತ್ತರದಾಯಿತ್ವ ಕಾಯ್ದುಕೊಳ್ಳಲು ಅತ್ಯಂತ ಪ್ರಮುಖವಾದ ಕಾಯ್ದೆಯಾಗಿದೆ. ಅನ್ನದಾತ ರೈತರು ಹಾಗೂ ಗಡಿ ಕಾಯುವ ಯೋಧರ ಕುಟುಂಬಗಳ ಅರ್ಜಿಗಳಿಗೆ ಅಧಿಕಾರಿಗಳು ಸ್ಪಂದಿಸಿ, ಕಾಲಮಿತಿಯೊಳಗೆ ಸರಿಯಾದ ಮಾಹಿತಿಯನ್ನು ನೀಡಬೇಕು ಎಂದು ಬೆಳಗಾವಿ ಪೀಠದ ರಾಜ್ಯ ಮಾಹಿತಿ ಆಯುಕ್ತರು ಸೂಚನೆ ನೀಡಿದ್ದಾರೆ.

# ಮಾಸಿಕ ಗೌರವ ಧನ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ಹಾವೇರಿ:** ಪ್ರಸಕ್ತ 2026–27ನೇ ಸಾಲಿಗೆ ಮಾಸಿಕ ಗೌರವಧನ ಸೌಲಭ್ಯಕ್ಕೆ ಜೈನ ಅರ್ಚಕರು, ಬೌದ್ಧ ಧರ್ಮಚಾರಿಗಳು ಹಾಗೂ ಸಿಖ್ ಗ್ರಂಥಿಗಳಿಂದ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಜೈನ್ ಅರ್ಚಕರು, ಬೌದ್ಧ ಧರ್ಮಚಾರಿಗಳು ಹಾಗೂ ಸಿಖ್ ಗ್ರಂಥಿಗಳು ನಿಗದಿತ ಅರ್ಜಿ ನಮೂನೆಗಳನ್ನು ಹಾವೇರಿಯ ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಭವನದಲ್ಲಿನ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳ ಕಚೇರಿಯಿಂದ ಪಡೆದುಕೊಂಡು ಅಗತ್ಯ ದಾಖಲೆಗಳೊಂದಿಗೆ ಭರ್ತಿಮಾಡಿದ ಅರ್ಜಿಯನ್ನು ದಿನಾಂಕ 15–10–2026 ಹಾವೇರಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ದೂರವಾಣಿ ಸಂಖ್ಯೆ 08375–234505 ಸಂಪರ್ಕಿಸಬಹುದು ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

ಸಮಾಲೋಚನೆ ಸುದ್ದಿ
SAMALOCHANE RANEBENNURSUDDI
Kannada Daily Morning

# ಶೌಚಾಲಯ ಗುಂಡಿ ಸ್ವಚ್ಛಗೊಳಿಸಲು ಸಕ್ಕಿಂಗ್-ಜಟ್ಟಿಂಗ್ ಯಂತ್ರಬಳಿಸಿ

**ಹಾವೇರಿ:** ಸರ್ಕಾರಿ ಕಚೇರಿಗಳು, ವಸತಿ ನಿಲಯ, ಆಸ್ಪತ್ರೆಗಳು ಸೇರಿದಂತೆ ಎಲ್ಲ ಶೌಚಾಲಯ ಗುಂಡಿಗಳನ್ನು ಸ್ವಚ್ಛಗೊಳಿಸಲು ಸಕ್ಕಿಂಗ್ ಹಾಗೂ ಜಟ್ಟಿಂಗ್ ಯಂತ್ರಗಳನ್ನು ಬಳಸಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಹಾಗೂ ಇನ್ ಸ್ಯಾನಿಟರಿ ಲ್ಯಾಟ್ರಿನ್ ಮತ್ತು ಸಫಾಯಿ ಕರ್ಮಚಾರಿಗಳ ಕುರಿತಾದ ಜಿಲ್ಲಾ ಮಟ್ಟದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸವಣೂರನಲ್ಲಿ ಶೌಚಾಲಯ ಗುಂಡಿ ಸ್ವಚ್ಛತೆ ವ್ಯಕ್ತಿಗಳನ್ನು ಬಳಸಲಾಗಿದ್ದು, ಈ ಪ್ರಕರಣದಲ್ಲಿ ತಪ್ಪಿಸ್ಥರನ್ನು ಅಮಾನತ್ ಮಾಡುವ ಮೂಲಕ ತಪ್ಪಿಸ್ಥರ ವಿರುದ್ಧ ಕ್ರಮವಾಗಿದೆ. ಕುಸನೂರಿನಲ್ಲಿ ಇಂತಹ ಪ್ರಕರಣ ನಡೆದಿದ್ದು, ಜಿಲ್ಲೆಯಲ್ಲಿ ಇಂತಹ ಪ್ರಕರಣಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕು ಎಂದು ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.



ಮೊದಲೇ ಖಾಲಿ ಮಾಡಿಸಿ: ಶೌಚಾಲಯ ಗುಂಡಿಗಳು ತುಂಬುವರೆಗೆ ಕಾಯದೆ ಮೊದಲೇ ಸ್ವಚ್ಛತೆ ಸಂಬಂಧಿಸಿದ ನಗರಸ್ಥಳೀಯ ಸಂಸ್ಥೆಗಳಿಗೆ ಪತ್ರ ರವಾನಿಸಬೇಕು ಹಾಗೂ ದೂರವಾಣಿ ಕರೆ ಮಾಡಬೇಕು. ಯಾವುದೇ ಕಾರಣಕ್ಕೂ ವ್ಯಕ್ತಿಗಳನ್ನು ಬಳಸುವಂತಿಲ್ಲ. ಸ್ಥಳೀಯ ಅಧಿಕಾರಿಗಳು ಇದನ್ನು ಗಂಭಿರವಾಗಿ ಪರಿಗಣಿಸಬೇಕು. ಸ್ಥಳೀಯ ನಗರಸಂಸ್ಥೆಗಳ ಮುಖ್ಯಾಧಿಕಾರಿಗಳು ಶೌಚಾಲಯ ಗುಂಡಿ ಸ್ವಚ್ಛತೆಗೆ ಮೊದಲ ಆದ್ಯತೆ ನೀಡಬೇಕು ಹಾಗೂ ಸಕ್ಕಿಂಗ್ ಮತ್ತು ಜಟ್ಟಿಂಗ್ ಯಂತ್ರಗಳನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳಬೇಕು ಎಂದು ಸೂಚನೆ ನೀಡಿದರು.

ಜಾಗೃತಿ ಮೂಡಿಸಿ: ಮ್ಯಾನ್ಯುಯಲ್ ಸ್ಕ್ಯಾವೆಂಜರ್ ನಿಷೇಧ ಕಾಯ್ದೆ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಕೆಲಸವನ್ನು ಅಧಿಕಾರಿಗಳು ಸಮನ್ವಯದಿಂದ ಮಾಡಬೇಕು ಎಂದು ಸೂಚನೆ ನೀಡಿದರು.

ಸಮಿತಿ ನಾಮನಿರ್ದೇಶಿತ ಸದಸ್ಯರಾದ ಸುಭಾಸ ಬೆಂಗಳೂರ ಅವರು, ಶೌಚಾಲಯ ಗುಂಡಿ ಸ್ವಚ್ಛಗೊಳಿಸಲು ಜಟ್ಟಿಂಗ್ -ಸಕ್ಕಿಂಗ್ ಮಿಷನ್ ಕಳುಹಿಸಿವುದು ವಿಳಂಬವಾಗುತ್ತಿದೆ. ಕೂಡಲೇ ಕಳಿಸುವ ವ್ಯವಸ್ಥೆ ಆಗಬೇಕು ಎಂದು ಸಭೆಯ ಗಮನಕ್ಕೆ ತಂದರೆ, ಇನ್ನೋರ್ವ ಸದಸ್ಯ ಭೀಮಪ್ಪ ಅವರು ಕೇಂದ್ರ ಬಸ್ ನಿಲ್ದಾಣ ಹಾಗೂ ರೈಲ್ವೆ ನಿಲ್ದಾಣದ ಶೌಚಾಲಯಗಳಲ್ಲಿ ಮೂತ್ರವಿಸರ್ಜನೆಗೂ ಸಹ ಐದುರೂಪಾಯಿ ಶುಲ್ಕ ವಿಧಿಸಲಾಗುತ್ತಿದೆ. ವಿದ್ಯಾರ್ಥಿಗಳು ಹಾಗೂ ಹಿರಿಯ ನಾಗರಿಕರಿಗೆ ತುಂಬಾ ಸಮಸ್ಯೆಯಾಗುತ್ತಿದೆ. ಮೂತ್ರವಿಸರ್ಜನೆ ಉಚಿತ ಪ್ರವೇಶ ನೀಡುತ್ತಿಲ್ಲ ಎಂದು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು.

ಸೂಚನಾ ಫಲಕ ಅಳವಡಿಸಿ: ಬಸ್ ನಿಲ್ದಾಣದಲ್ಲಿ ಮೂತ್ರ ವಿಸರ್ಜನೆ ಉಚಿತ ಎಂದು ಸೂಚನಾ ಫಲಕ ಅಳವಡಿಸುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ವಿಭಾಗೀಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಸೂಚನಾ ಫಲಕ ಅಳವಡಿಸಿದ ಕುರಿತು ಜಿಪಿಎಸ್ ಫೋಟೋ ವರದಿ ಕಳಿಸುವಂತೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ದಲ್ಜಿಜ್‌ಕುಮಾರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಮತಿ ಯಶೋಧಾ ವಂಟಗೋಡಿ, ಸವಣೂರು ಉಪ ವಿಭಾಗಾಧಿಕಾರಿ ಪ್ರಕಾಶ ಖೋಡೆ, ಜಿ.ಪಂ.ಉಪಕಾರ್ಯದರ್ಶಿ ಡಾ.ಪುನಿತ್, ಜಿಲ್ಲಾ ಸರ್ಕಾರಿ ಅಭಿಯೋಜಕರಾದ ಶ್ರೀಮತಿ ಸರೋಜಾ ಕೂಡಲಮಠ, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಸ್ಥಳೀಯ ನಗರ ಸಂಸ್ಥೆಗಳ ಮುಖ್ಯಾಧಿಕಾರಿಗಳು, ತಾಲೂಕಾ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಇತರರು ಉಪಸ್ಥಿತರಿದ್ದರು.

# ಮೈಸೂರು ದಸರಾ ಉದ್ಘಾಟಕರಾಗಿ ಗವಿಸಿದ್ದೇಶ್ವರ ಶ್ರೀಗಳಿಗೆ ಅಧಿಕೃತ ಆಹ್ವಾನ

**ಕೊಪ್ಪಳ:** ಮೈಸೂರು ದಸರಾ ಮಹೋತ್ಸವದ ಉದ್ಘಾಟಕರಾಗಿ ಆಯ್ಕೆಯಾಗಿರುವ ಕೊಪ್ಪಳದ ಗವಿಮಠದ ಪೂಜ್ಯ ಗವಿಸಿದ್ದೇಶ್ವರ ಶ್ರೀಗಳಿಗೆ ಅಧಿಕೃತ ಆಹ್ವಾನ ನೀಡಲಾಯಿತು.

ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರಾದ ಸನ್ಮಾನ್ಯ ಶ್ರೀ ಶಿವರಾಜ್ ಎಸ್. ತಂಗಡಗಿ ಅವರು ಸೋಮವಾರ ಗವಿಮಠಕ್ಕೆ ಸೋಮವಾರ ಭೇಟಿ ನೀಡಿ, ಶ್ರೀಗಳಿಗೆ ಫಲಪುಷ್ಪ ನೀಡಿ ಆತ್ಮೀಯವಾಗಿ ಆಹ್ವಾನಿಸಿದರು.

ಈ ಸಂದರ್ಭದಲ್ಲಿ ಸಂಸದ ರಾಜಶೇಖರ ಹಿಟ್ನಾಳ, ಶಾಸಕ ರಾಘವೇಂದ್ರ ಹಿಟ್ನಾಳ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ನಾಗಪ್ಪ, ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿ ಸುರೇಶ ಇಟ್ನಾಳ ಉಪಸ್ಥಿತರಿದ್ದರು.

ಮೈಸೂರು ದಸರಾ ಉದ್ಘಾಟನೆಗೆ ಕೊಪ್ಪಳ ಜಿಲ್ಲೆಯ ಶ್ರೀಗಳು ಆಯ್ಕೆಯಾಗಿರುವುದು ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ ಎಂದು ಸಚಿವರು ಈ ಸಂದರ್ಭದಲ್ಲಿ ಹರ್ಷ ವ್ಯಕ್ತಪಡಿಸಿದರು.



# ಗದಗ-ಬೆಟಗೇರಿಗೆ ಸಮರ್ಪಕ ನೀರು ಪೂರೈಕೆಗೆ ಆಗ್ರಹ: ಹೋಮ ನೆರವೇರಿಸಿ ಬಿಜೆಪಿ ಆಕ್ರೋಶ

**ಗದಗ:** ಗದಗ-ಬೆಟಗೇರಿ ಅವಳಿ ನಗರಕ್ಕೆ ಸಮರ್ಪಕವಾಗಿ ನೀರು ಪೂರೈಕೆ ಮಾಡುವಂತೆ ಆಗ್ರಹಿಸಿ ಬಿಜೆಪಿ ಜಿಲ್ಲಾ ಘಟಕದ ವತಿಯಿಂದ ನಗರದ ಹುಯಿಲಗೋಳ ನಾರಾಯಣರಾವ ವೃತ್ತದಲ್ಲಿ ಹೋಮ ನೆರವೇರಿಸಿ ಆಕ್ರೋಶ ವ್ಯಕ್ತಪಡಿಸಲಾಯಿತು.

ಸಮರ್ಪಕವಾಗಿ ನೀರು ಪೂರೈಸದೆ ಶಾಸಕ ಎಚ್.ಕೆ. ಪಾಟೀಲ ಅವರು ಅವಳಿ ನಗರಕ್ಕೆ ಅನ್ಯಾಯ ಮಾಡಿದ್ದಾರೆ.

ಇನ್ನೊಂದು ವಾರದಲ್ಲಿ ನೀರು ಪೂರೈಸದಿದ್ದರೆ ಅವರು ಶಾಸಕ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಲಾಯಿತು. ಪ್ರತಿಭಟನಾನಿರತರು ಖಾಲಿ ಕೊಡಗಳನ್ನು ಪ್ರದರ್ಶಿಸಿದರು. ತಮಟೆ, ಹಲಗಿ ಬಾರಿಸುತ್ತ, ಮಹಾತ್ಮ ಗಾಂಧಿ ವೃತ್ತದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು. ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಲಾಯಿತು. ಜಿಲ್ಲಾಧಿಕಾರಿ ಸ್ಥಳಕ್ಕೆ ಬಂದು ಮನವಿ ಸ್ವೀಕರಿಸಿ, ನೀರು ಪೂರೈಕೆಯ ಭರವಸೆ ನೀಡುವವರೆಗೆ ಪ್ರತಿಭಟನೆ ಹಿಂಪಡೆಯುವುದಿಲ್ಲವೆಂದು ಪಟ್ಟು ಹಿಡಿದರು.



# ಜಿಲ್ಲಾ ಬೋಧಕ ಆಸ್ಪತ್ರೆಯಲ್ಲಿ ಆರೋಗ್ಯ ಕಾರ್ಯಕ್ರಮ

ಕೊಪ್ಪಳ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಬೋಧಕ ಆಸ್ಪತ್ರೆ ಹಾಗೂ ತಾಯಿ ಮತ್ತು ಮಕ್ಕಳ ಆಸ್ಪತ್ರೆ, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಆಸ್ಪತ್ರೆಯ ಸಭಾಭವನದಲ್ಲಿ ಸೋಮವಾರದಂದು "ಅಂತರಾಷ್ಟ್ರೀಯ ಸುರಕ್ಷಿತ ಗರ್ಭಪಾತ ಸೇವೆಗಳ ದಿನ" ಹಾಗೂ "ಅಂತರಾಷ್ಟ್ರೀಯ ಶ್ರವಣದೋಷ ಸಪ್ತಾಹ " ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಬೋಧಕ ಆಸ್ಪತ್ರೆಯ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರಾದ ಡಾ.ರಾಜೇಶ್, ಇವರು ಕಾರ್ಯಕ್ರಮ ಉದ್ಘಾಟಿಸಿ, ಗರ್ಭಪಾತ ಸೇವೆಗಳ ಕುರಿತು ಮಾತನಾಡಿದರು. "ಒಗ್ಗಟ್ಟಿನ ಕಾರ್ಯಾಚರಣೆ: ಎಲ್ಲರಿಗೂ ಆಯ್ಕೆ ಮತ್ತು ಸೇವೆಗಳ ಲಭ್ಯತೆಯನ್ನು ಸಬಲೀಕರಣಗೊಳಿಸುವುದು" ಎಂಬ ಘೋಷವಾಕ್ಯದೊಂದಿಗೆ ಈ ಕಾರ್ಯಕ್ರಮನ್ನು ಆಚರಿಸಲಾಗುತ್ತದೆ. ಸುರಕ್ಷಿತ ಗರ್ಭಪಾತ ಎಂದರೆ, ಅರ್ಹ ಹಾಗೂ ತರಬೇತಿ ಪಡೆದ ಆರೋಗ್ಯ ರಕ್ಷಣೆ ನೀಡುಗರಿಂದ ಸೂಕ್ತ ವೈದ್ಯಕೀಯ ಪರಿಸರದಲ್ಲಿ ಮತ್ತು ವೈಜ್ಞಾನಿಕವಾಗಿ ಅನುಮೋದಿತ ವಿಧಾನಗಳ ಮೂಲಕ ಮಾಡಲಾಗುವ ಗರ್ಭಪಾತವನ್ನು ಸುರಕ್ಷಿತ ಗರ್ಭಪಾತ ಎನ್ನಲಾಗುತ್ತದೆ. ಇದು ಮಹಿಳೆಯರ ಲೈಂಗಿಕ ಮತ್ತು ಸಂತಾನೋತ್ಪತ್ತಿ ಹಕ್ಕುಗಳನ್ನು ರಕ್ಷಿಸುವ ಮತ್ತು ಅಸುರಕ್ಷಿತ ಗರ್ಭಪಾತದಿಂದ ಉಂಟಾಗುವ ತಾಯಂದಿರ ಮರಣ ಪ್ರಮಾಣವನ್ನು ತಡೆಗಟ್ಟುವ ಗುರಿ ಹೊಂದಿರುವ ಜಾಗತಿಕ ಆರೋಗ್ಯ ಯೋಜನೆಯಾಗಿದೆ ಎಂದು ತಿಳಿಸಿದರು.

ಕಿವಿ, ಮೂಗು ಹಾಗೂ ಗಂಟಲು ತಜ್ಞರಾದ ಡಾ.ಅವಿನಾಶ್ ಇವರು ಮಾತನಾಡಿ, "ಅಂತರಾಷ್ಟ್ರೀಯ ಶ್ರವಣದೋಷ ಸಪ್ತಾಹ ಕಾರ್ಯಕ್ರಮ"ದ ಉದ್ದೇಶ ಶ್ರವಣದೋಷ ಮತ್ತು ಕಿವುಡುತನ ತಡೆಗಟ್ಟುವಿಕೆ ಮತ್ತು ನಿಯಂತ್ರಣದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವುದಾಗಿದೆ. "ಶ್ರವಣದೋಷವುಳ್ಳವರ ಮಾನವ ಹಕ್ಕುಗಳನ್ನು ಘೋಷಿಸುವುದು" ಎಂಬ ಘೋಷವಾಕ್ಯದೊಂದಿಗೆ ಈ ವರ್ಷ ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮ ಆಚರಿಸಲಾಗುತ್ತದೆ. ಕಿವಿಯು ಪ್ರತಿಯೊಬ್ಬ ಮನುಷ್ಯನ ಪಂಚೇಂದ್ರಿಯಗಳಲ್ಲಿ ಪ್ರಮುಖ ಅಂಗವಾಗಿದ್ದು, ಅದನ್ನು ಪ್ರತಿಯೊಬ್ಬರೂ ತಮ್ಮ ಜೀವನದುದ್ದಕ್ಕೂ ರಕ್ಷಣೆ ಮಾಡಿಕೊಳ್ಳಬೇಕು. ಕಿವಿಯಲ್ಲಿ ಕಡ್ಡಿ ಹಾಕಬಾರದು, ಎಣ್ಣೆ ಹಾಕಬಾರದು, ನಕಲಿ ವೈದ್ಯರ ಕಡೆಯಿಂದ ಕಿವಿಯಲ್ಲಿ ಗುಗ್ಗೆ ತೆಗೆಸಿಕೊಳ್ಳಬಾರದು. ವೈದ್ಯರ ಸಲಹೆ ಇಲ್ಲದೆ ಕಿವಿಯಲ್ಲಿ ಏನೂ ಹಾಕಬಾರದು, ಕಲುಷಿತ ನೀರಿನಲ್ಲಿ ಈಜಬಾರದು ಎಂದು ತಿಳಿಸಿದರು. ಕಿವಿನೋವು, ಸೋರುವಿಕೆ ಕಂಡು ಬಂದರೆ ತಮ್ಮ ಸಮೀಪದ ತಾಲೂಕಾ/ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ, ಕಿವಿ, ಮೂಗು, ಗಂಟಲು ತಜ್ಞರನ್ನು ಸಂಪರ್ಕಿಸಬೇಕು ಹಾಗೂ 2 ವರ್ಷದೊಳಗಿನ ಮಕ್ಕಳಿಗೆ ಉಚಿತ ಶ್ರವಣ ಶಸ್ತ್ರಚಿಕಿತ್ಸೆಯನ್ನು ಮಾಡಲಾಗುವುದು ಎಂದು ತಿಳಿಸಿದರು.

ಆಡಿಯೋಲಾಜಿಸ್ಟ್ ಬಿಂದು ಮಾತನಾಡಿ, ಕಿವಿಯ ಆರೋಗ್ಯ ರಕ್ಷಣೆಯಲ್ಲಿ ಅನುಸರಿಸಬೇಕಾದ ನಿಯಮಗಳು, ಕಿವಿಯ ಪರೀಕ್ಷೆ ಹಾಗೂ ಸೇವಾ ಸೌಲಭ್ಯಗಳ ಬಗ್ಗೆ ವಿವರವಾಗಿ ಮಾತನಾಡಿದರು.

ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ರವೀಂದ್ರನಾಥ್ ಎಂ.ಹೆಚ್. ಇವರು ಕುಟುಂಬ ಕಲ್ಯಾಣ ಕಾರ್ಯಕ್ರಮ, ಕಿವಿಯ ಆರೋಗ್ಯದ ಬಗ್ಗೆ, ಅಂತರಾಷ್ಟ್ರೀಯ ಶ್ರವಣದೋಷ ಸಪ್ತಾಹ ಕಾರ್ಯಕ್ರಮ ಮತ್ತು ಕಾರ್ಯಕ್ರಮದಡಿಯಲ್ಲಿ ಸಿಗುವ ಸೇವಾ ಸೌಲಭ್ಯಗಳ ಮತ್ತು ಚಿಕಿತ್ಸೆ ಕುರಿತು ವಿವರವಾಗಿ ಮಾತನಾಡಿದರು.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ॥ಪ್ರಕಾಶ ವಿ. ಅವರು ತಾಯಿ ಮತ್ತು ಮಗುವಿನ ಆರೋಗ್ಯ, ಗರ್ಭಿಣಿಯರ ಆರೋಗ್ಯ ತಪಾಸಣೆ, ರಕ್ತಹೀನತೆ ಕುರಿತು ವಿವರವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ(ಪ್ರ)ಗಳಾದ ದೇವಮ್ಮ, ಭೌತಚಿಕಿತ್ಸಕರಾದ ಡಾ.ಚೈತ್ರಾ, ಆರ್.ಕೆ.ಎಸ್.ಕೆ ಸಮಾಲೋಚಕರಾದ ಸ್ವರೂಪರಾಣಿ, ಕುಟುಂಬ ಯೋಜನೆಯ ಸಮಾಲೋಚಕರಾದ ವಿಜಯಲಕ್ಷ್ಮೀ, ಶುಶ್ರೂಣಾಧಿಕಾರಿಗಳ ಮೇಲ್ವಿಚಾರಕರಾದ ಸುಮಂಗಲ, ಶುಶ್ರೂಣಾಧಿಕಾರಿಗಳಾದ ಜ್ಯೋತಿ, ಶ್ವೇತಾ, ತಾಯಂದಿರು, ಗರ್ಭಿಣಿ ಸ್ತ್ರೀಯರು, ಸಾರ್ವಜನಿಕರು ಹಾಗೂ ಇಂಟರ್ನ್‌ಶಿಪ್ ವಿದ್ಯಾರ್ಥಿಗಳು ಇತರೆ ಆರೋಗ್ಯ ಸಿಬ್ಬಂದಿಗಳು, ಭಾಗವಹಿಸಿ ಯಶಸ್ವಿಗೊಳಿಸಿದರು.



# ರಾಜ್ಯಕ್ಕೆ 25 ಸಾವಿರ ಕೋಟಿ ಬರ ಪರಿಹಾರ ನೀಡಲಿ ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರಡ್ಡಿ ಹೇಳಿಕೆ

**ಯಲಬುರ್ಗಾ:** ರಾಜ್ಯದಲ್ಲಿ ಭೀಕರ ಬರಗಾಲದಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ರಾಜ್ಯ ಸರ್ಕಾರ 210 ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಕರ್ನಾಟಕಕ್ಕೆ 25 ಸಾವಿರ ಕೋಟಿ ಬರ ಪರಿಹಾರ ನೀಡಬೇಕು ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರಡ್ಡಿ ಹೇಳಿದರು.

ತಾಲೂಕಿನ ಸಂಕನೂರು, ಹಿರೇಮ್ಯಾಗೇರಿ ಹಾಗೂ ಮುಧೋಳ ಗ್ರಾಮಗಳಲ್ಲಿ ಭಾನುವಾರ ಬ್ಲಾಕ್ ಕಾಂಗ್ರೆಸ್ ವತಿಯಿಂದ ಹಮ್ಮಿಕೊಂಡಿದ್ದ ಜನಸೇವಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ರಾಜ್ಯ ಸರ್ಕಾರ ತನ್ನ ಪಾಲಿನ ಬರ ಪರಿಹಾರ ನೀಡಲಿದೆ. ಕರ್ನಾಟಕದಿಂದ ಪ್ರತಿವರ್ಷ ಕೇಂದ್ರ ಸರ್ಕಾರಕ್ಕೆ ಸುಮಾರು 4.50 ಲಕ್ಷ ಕೋಟಿ ತೆರಿಗೆ ಪಾವತಿಯಾಗುತ್ತಿದೆ. ಆದರೆ ರಾಜ್ಯದ ಪಾಲಿನ ಹಣ ಸಮರ್ಪಕವಾಗಿ ದೊರೆಯುತ್ತಿಲ್ಲ. ಬರ ಪರಿಹಾರ ನೀಡುವ ವಿಚಾರದಲ್ಲಿ ಕೇಂದ್ರ ಸರ್ಕಾರ ನಿರ್ಲಕ್ಷ್ಯ ವಹಿಸುತ್ತಿದೆ ಎಂದು ಆರೋಪಿಸಿದರು.

### ಶೀಘ್ರ ಸ್ಥಳೀಯ ಸಂಸ್ಥೆಗಳ ಚುನಾವಣೆ

ಡಿಸೆಂಬರ್‌ನಲ್ಲಿ ಜಿಪಂ, ತಾಪಂ ಮತ್ತು ಜನವರಿಯಲ್ಲಿ ಗ್ರಾಪಂ ಚುನಾವಣೆ ನಡೆಯುವ ಸಾಧ್ಯತೆ ಇದೆ. ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳಿಗೆ ಜನರು ಆಶೀರ್ವಾದ ನೀಡಿ, ನಮ್ಮೊಂದಿಗೆ ಅಭಿವೃದ್ಧಿ ಕಾರ್ಯಗಳಲ್ಲಿ ಕೈಜೋಡಿಸಲು ಅವಕಾಶ ಕಲ್ಪಿಸಬೇಕು ಎಂದರು.

### ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭರವಸೆ

ಹಿರೇಮ್ಯಾಗೇರಿಯಲ್ಲಿ 3 ಕೋಟಿ ವೆಚ್ಚದಲ್ಲಿ ನೂತನ ಕಸ್ತೂರಿಬಾ ಶಾಲೆ ನಿರ್ಮಾಣಕ್ಕೆ ಅನುದಾನ ನೀಡಲಾಗುವುದು. ಇದಕ್ಕಾಗಿ ಗ್ರಾಮಸ್ಥರು ಅಗತ್ಯ ಭೂಮಿ ಒದಗಿಸಬೇಕು. ಸಂಕನೂರಿನಲ್ಲಿ ನೂತನ ಬುದ್ಧ ಬಸವ ಭವನ ಹಾಗೂ ಮಸೀದಿ ನಿರ್ಮಾಣಕ್ಕೆ ಅನುದಾನ ನೀಡಲಾಗುವುದು. ಮುಧೋಳದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಈಗಾಗಲೇ ಅನುದಾನ ಒದಗಿಸಲಾಗಿದ್ದು, ಗ್ರಾಮಸ್ಥರು ಅಭಿವೃದ್ಧಿ ಕಾರ್ಯಗಳಿಗೆ ಸಹಕಾರ ನೀಡಬೇಕು ಎಂದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆರಿಬಸಪ್ಪ ನಿಡಗುಂದಿ ಮಾತನಾಡಿದರು. ಈ ಸಂದರ್ಭ ಮುಖಂಡರಾದ ಆನಂದ ಉಳ್ಳಾಗಡ್ಡಿ, ಶರಣಪ್ಪ ಗಾಂಜಿ, ಹೇಮರೆಡ್ಡಿ ರಡ್ಡೇರ್, ರಾಜಶೇಖರ ನಿಂಗೋಜಿ, ಚಂದ್ರು ದೇಸಾಯಿ, ಹಂಪಯ್ಯಸ್ವಾಮಿ ಹಿರೇಮಠ, ಮಲ್ಲಿಕಾರ್ಜುನ ಜಕ್ಕಲಿ, ಸಂಗಣ್ಣ ತೆಂಗಿನಕಾಯಿ, ಈರಪ್ಪ ಕುಡಗುಂಟಿ, ಸಂಗಮೇಶ ಗುತ್ತಿ, ಮಹಾಂತೇಶ ಗಾಣಗೇರ, ಅಂದಪ್ಪ ಸುಬೇದಾರ, ಶಿವಾನಂದ ಬಣಕಾರ, ಶಿವರಡ್ಡೆಪ್ಪ ತೋಟದ್, ಅಶೋಕ ಮಾಲಿಪಾಟೀಲ್, ಸಿದ್ದು ಪಾಟೀಲ್, ಕಲ್ಲನಗೌಡ ಪಾಟೀಲ್, ಹನುಮಗೌಡ ಮಾಲಿಪಾಟೀಲ್, ಕಳಕಪ್ಪ ಕುರಿ, ಬಸಪ್ಪ ಅಕ್ಕಿ, ಛತ್ರಪ್ಪ ಛಲವಾದಿ, ಮಲ್ಲೇಶಗೌಡ ಮಾಲಿಪಾಟೀಲ್, ಯಲ್ಲಪ್ಪ ಹುನಗುಂದ, ಎಚ್.ಎಚ್.ಹಿರೇಮನಿ ಸೇರಿದಂತೆ ಮತ್ತಿತರರು ಇದ್ದರು.



SAMALOCHANE RANEBENNURSUDDI KANNADA DAILY MORNING, OWNER, PUBLISHER BY: RAJESHWARI S OLEKAR, PUBLISHED FROM: H.NO, 58 MAIN ROAD, YAKALASAPUR, SUB DISTRICT RANEBENNUR, HAVERI, KARNATAKA-581115, PRINTED AT: VEDAMURTHY S T, GAYATHRI PUBLICATIONS, H.NO, 720, NEKAR COLONY, INDUSTRIAL AREA, HAVERI, KARNATAKA- 581115, EDITOR BY: RAJESHWARI S OLEKAR